ಸಂಪುಟ : ೯ ಸಂಚಿಕೆ ೯೦ ಪುಟ : ೪ ಬೆಲೆ: ೩.೦೦ ಶುಕ್ರವಾರ ಮೇ 10 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 90 Pages : 4 Price : 3.00 Friday May 10 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಮತದಾರರಿಗೆ ಧನ್ಯವಾದ ತಿಳಿಸಿದ ಜಿಲ್ಲಾಡಳಿತ

## ಪ್ರಜಾಪ್ರಭುತ್ವ ಹಬ್ಬದಲ್ಲಿ ಪಾಲ್ಗೊಂಡ ತಮ್ಮೆಲ್ಲರಿಗೂ ಕೃತಜ್ಞತೆಗಳು



■ ವಿಜಯಸಾಕ್ಷಿ ಸುದ್ದಿ, ಗದಗ

ಭಾರತದಲ್ಲಿ ಪ್ರಜಾಪ್ರಭುತ್ವದ ಬುನಾದಿ ಮತದಾನ. ಭಾರತದಲ್ಲಿ ಪ್ರತಿಯೊಬ್ಬ ನಾಗರಿಕನಿಗೂ ಅದರಲ್ಲಿ ಭಾಗವಹಿಸುವ ಹಕ್ಕು ಮತ್ತು ಜವಾಬ್ದಾರಿ ಇದೆ. ನಾವು ನಮ್ಮ ರಾಷ್ಟ್ರದ ಭವಿಷ್ಯವನ್ನು ರೂಪಿಸಲು ಸಕ್ರಿಯವಾಗಿ ಕೊಡುಗೆ ನೀಡಬಹುದು ಮತ್ತು ಜವಾಬ್ದಾರಿಯುತ ನಾಗರಿಕರಾಗಿ ನಮ್ಮ ಕರ್ತವ್ಯವನ್ನು ಪೂರೈಸಬಹುದು.

ಇದೇ ಮೇ 7 ರಂದು ಗದಗ ಜಿಲ್ಲೆಯಲ್ಲಿ ನಡೆದ ಲೋಕಸಭಾ ಚುನಾವಣೆಯಲ್ಲಿ ಅತೀವ ಆಸಕ್ತಿ ಉತ್ಸಾಹದಿಂದ ಮತದಾರರಾದ ತಾವೆಲ್ಲರು ಪಾಲ್ಗೊಳ್ಳುವ ಮೂಲಕ ಜಿಲ್ಲೆಯ ಮತದಾನದ ಪ್ರಮಾಣವನ್ನು ಅಧಿಕಗೊಳಿಸುವಲ್ಲಿ ಪ್ರಮುಖ ಪಾತ್ರವಹಿಸಿದ್ದಿರಿ ತಮಗೆಲ್ಲ ಅಭಿನಂದನೆಗಳು.

ಲೋಕಸಭಾ ಚುನಾವಣೆಯಲ್ಲಿ ಗದಗ ಜಿಲ್ಲೆಯ ಮತದಾರರೆಲ್ಲರು ಪ್ರಜಾಪ್ರಭುತ್ವ ಹಬ್ಬದಲ್ಲಿ ಪಾಲ್ಗೊಂಡು ತಮ್ಮ ಮತ ಚಲಾಯಿಸಿದ್ದಿರಿ. ತಮಗೆಲ್ಲರಿಗೂ ತುಂಬು ಹೃದಯದ ಕೃತಜ್ಞತೆಗಳು ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ ಎಲ್ ಅವರು ತಿಳಿಸಿದ್ದಾರೆ.

ಲೋಕಸಭೆ ಚುನಾವಣೆಯನ್ನು ಅತ್ಯಂತ ಶಾಂತಿಯುತ ಹಾಗೂ ಸುಗಮವಾಗಿ ನಡೆಸಲು ಸಹಕರಿಸಿದ ಜಿಲ್ಲೆಯ ಪ್ರತಿಯೊಬ್ಬ ನಾಗರಿಕರಿಗೆ, ಜನಪ್ರತಿನಿಧಿಗಳು, ಎಲ್ಲ ರಾಜಕೀಯ ಪಕ್ಷಗಳ ಮುಖಂಡರು, ಕಂದಾಯ, ಜಿಲ್ಲಾ ಪಂಚಾಯತಿ ಹಾಗೂ ಪೊಲೀಸ್ ಸೇರಿದಂತೆ ಪ್ರತಿಯೊಂದು ಇಲಾಖೆಗಳ ಅಧಿಕಾರಿಗಳು/ಸಿಬ್ಬಂದಿ, ಸ್ವೀಪ್ ಚಟುವಟಿಕೆಗಳಲ್ಲಿ ಭಾಗವಹಿಸುವ ಮೂಲಕ ಮತದಾನ ಹೆಚ್ಚಳಕ್ಕೆ ಕೈಜೋಡಿಸಿದ ಸಂಘ-ಸಂಸ್ಥೆಗಳು ಹಾಗೂ ಮಾಧ್ಯಮ ಪ್ರತಿನಿಧಿಗಳಿಗೆ ಜಿಲ್ಲಾಧಿಕಾರಿ ವೈಶಾಲಿ ಎಂ ಎಲ್ ಅವರು ಕೃತಜ್ಞತೆ ಸಲ್ಲಿಸಿದ್ದಾರೆ.

ಮತದಾರರ ಶಿಕ್ಷಣ ಹಾಗೂ ಸಹಭಾಗಿತ್ವ ಕಾರ್ಯದಲ್ಲಿ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು, ಸಂಘ ಸಂಸ್ಥೆಗಳ ಪದಾಧಿಕಾರಿಗಳು, ಶಾಲಾ ಕಾಲೇಜು ವಿದ್ಯಾರ್ಥಿಗಳು ಪಾಲ್ಗೊಂಡು ಜಿಲ್ಲೆಯ ಮತದಾನ ಪ್ರಮಾಣ ಈ ಹಿಂದಿನ ಚುನಾವಣಾ ಮತದಾನಕ್ಕಿಂತ ಅಧಿಕಗೊಳಿಸುವಲ್ಲಿ ಸಹಕಾರ ನೀಡಿದ್ದು, ಎಲ್ಲರಿಗು ಧನ್ಯವಾದಗಳು ಎಂದು ಜಿಲ್ಲಾ ಸ್ವೀಪ್ ಸಮಿತಿ ಅಧ್ಯಕ್ಷರಾಗಿರುವ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್ ಅವರು ಹೇಳಿದ್ದಾರೆ.

ಮತದಾನವು ಜನತೆಯ ಯಾವುದಾದರೂ ವಿಷಯ, ಅಥವಾ ಅಭ್ಯರ್ಥಿಗಳ ಬಗ್ಗೆ ತಮ್ಮ ನಿರ್ಣಯಗಳನ್ನು ಸೂಚಿಸಲು ಅನುವು ಮಾಡಿಕೊಡುವ ಒಂದು ಪ್ರಕ್ರಿಯೆ. ಲೋಕಸಭೆ ಚುನಾವಣೆ ಮತದಾನದ ಪ್ರಕ್ರಿಯೆಯನ್ನು ಅತ್ಯಂತ ಶಾಂತಿಯುತ ಹಾಗೂ ಸುಗಮವಾಗಿ ನಡೆಸಲು ಸಹಕರಿಸಿದ ಜಿಲ್ಲೆಯ ಪ್ರತಿಯೊಬ್ಬ ನಾಗರಿಕರಿಗೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ ಅವರು ಧನ್ಯವಾದಗಳು ಎಂದು ಹೇಳಿದ್ದಾರೆ.

## ಎಸ್‌ಎಸ್‌ಎಲ್‌ಸಿ ಪಾಸಾದ ವಿದ್ಯಾರ್ಥಿಗಳ ಗಮನಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ರೋಣ ತಾಲೂಕಿನ ಸರಕಾರಿ ಪಾಲಿಟೆಕ್ನಿಕ್ ಕಾಲೇಜು ಹೊಳೆ-ಆಲೂರ ಸಂಸ್ಥೆಯಲ್ಲಿ 2024-2025ನೇ ಶೈಕ್ಷಣಿಕ ಸಾಲಿಗೆ

ಆರ್ಟಿಫಿಸಿಯಲ್ ಇಂಟೆಲಿಜೆನ್ಸಿ, ಕಂಪ್ಯೂಟರ್ ಸೈನ್ಸ & ಇಂಜಿನಿಯರಿಂಗ್, ಇಲೆಕ್ಟ್ರಾನಿಕ್ಸ್ & ಕಮ್ಯೂನಿಕೇಶನ್ ಇಂಜಿನಿಯರಿಂಗ್, ಎಲೆಕ್ಟ್ರಿಕಲ್ & ಇಲೆಕ್ಟ್ರಾನಿಕ್ಸ್ ಇಂಜಿನಿಯರಿಂಗ್ ಕೋರ್ಸ್‌ಗಳಿಗೆ ಮೇ 9 ರಿಂದ ಮೇ 14ರ ವರೆಗೆ ಮೊದಲ ಹಂತದ ಪ್ರವೇಶ ಪ್ರಕ್ರಿಯೆ ನಡೆಯುವದು. ಆಸಕ್ತ ಎಸ್ ಎಸ್ ಎಲ್ ಸಿ ಪಾಸಾದ ವಿದ್ಯಾರ್ಥಿಗಳು ದೃಢೀಕೃತ ಎಸ್ ಎಸ್ ಎಲ್ ಸಿ ಅಂಕಪಟ್ಟಿ , 5 ವರ್ಷ ಕರ್ನಾಟಕದಲ್ಲಿ ಅಧ್ಯಯನ ಮಾಡಿದ ವ್ಯಾಸಂಗ ಪ್ರಮಾಣ ಪತ್ರ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಮೂಲ ವರ್ಗಾವಣೆ ಪ್ರತಿ, 6 ಇತ್ತೀಚಿನ ಭಾವಚಿತ್ರ, ಆಧಾರ್ ಕಾರ್ಡ್, ವೈದ್ಯಕೀಯ ಪ್ರಮಾಣಪತ್ರ ಒಳಗೊಂಡ ಎಲ್ಲಾ ದಾಖಲೆಗಳನ್ನು 3 ಪ್ರತಿಯಲ್ಲಿ ಸಂಸ್ಥೆಗೆ ಹೋಗಿ ಅರ್ಜಿ ಸಲ್ಲಿಸಬಹುದಾಗಿದೆ.

### ಡೆಡ್ ಸ್ಟೋರೇಜ್‌ನಿಂದ ನೀರು ಪೂರೈಕೆ | ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ

# ಪರಿಸ್ಥಿತಿಯರಿತು ನೀರು ಬಳಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯಾದ್ಯಂತ ಬರದ ಛಾಯೆಯಿದ್ದು, ಗದಗ ಜಿಲ್ಲೆಯಲ್ಲಿಯೂ ಕುಡಿಯುವ ನೀರಿನ ಸ್ಥಿತಿ ಚಿಂತಾಜನಕವಾಗಿದೆ. ನದಿ ಪಾತ್ರದಲ್ಲಿಯೂ ನೀರಿನ ಅಭಾವ ತಲೆದೋರಿದೆ. ಇಂತಹ ಸಂದಿಗ್ಧ ಸ್ಥಿತಿಯನ್ನರಿತು ಸಾರ್ವಜನಿಕರು ನೀರನ್ನು ಮಿತವಾಗಿ ಬಳಕೆ ಮಾಡಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಗುರುವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಸಚಿವರು, ಪ್ರಸ್ತುತ ಲಭ್ಯವಿರುವ ಮಾಹಿತಿಯ ಪ್ರಕಾರ ಭದ್ರಾ ಜಲಾಶಯದಲ್ಲಿಯೂ ಕೇವಲ 8 ಟಿಎಂಸಿ ನೀರು ಮಾತ್ರ ಲಭ್ಯವಿದೆ. ಈ ಹಿಂದೆ ನೀರು ಬಿಡುವಂತೆ ಕೋರಿದಾಗ ಹಮ್ಮಿಗಿ ಬ್ಯಾರೇಜಿಗೆ 0.4 ಟಿಎಂಸಿ ಮಾತ್ರ ಬಂದಿತ್ತು. ಹೀಗಾಗಿ ಸದ್ಯ ಲಭ್ಯವಿರುವ ಡೆಡ್ ಸ್ಟೋರೇಜ್‌ನಿಂದ ನೀರು ಪೂರೈಕೆ ಮಾಡಲಾಗುತ್ತಿದೆ ಎಂದು ತಿಳಿಸಿದರು.

ನೀರಿನ ಲಭ್ಯತೆ ಕಡಿಮೆ ಇರುವ ಕಾರಣ ಭದ್ರಾ ಡ್ಯಾಂನಿಂದ ನೀರು ಬಿಡುವಂತೆ ವಿನಂತಿಸಲಾಗಿದೆ. ಈ ಬಗ್ಗೆ ಮುಖ್ಯಮಂತ್ರಿಗಳಿಗೂ ಮನವಿ ಮಾಡಲಾಗಿದ್ದು,



ಮತ್ತೊಮ್ಮೆ ಮುಖ್ಯಮಂತ್ರಿಗಳ ಸಂಪರ್ಕ ಮಾಡಿ ನೀರು ಬಿಡುಗಡೆಗೆ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಗದಗ-ಬೆಟಗೇರಿ ಅವಳಿ ನಗರಕ್ಕೆ ಮಾತ್ರವಲ್ಲದೆ, ಜಿಲ್ಲೆಯ ಗ್ರಾಮೀಣ ಭಾಗದಲ್ಲಿಯೂ ನೀರಿನ ಸಮಸ್ಯೆ ಎಲ್ಲೆ ಮೀರಿದೆ. ಡಿಪಿಒಟಿ ಮೂಲಕ ನೀರು ಪೂರೈಕೆಯ ವ್ಯವಸ್ಥೆ ಸರಿಯಾಗಿ ನಡೆದಿತ್ತು. ಆದರೆ, ಕೆಲ ತಾಂತ್ರಿಕ ಸಮಸ್ಯೆಯಿಂದಾಗಿ ಗ್ರಾಮೀಣ ಭಾಗಕ್ಕೂ ನೀರು ಸಮರ್ಪಕವಾಗಿ ತಲುಪುತ್ತಿಲ್ಲ. ಈ ಬಗ್ಗೆ ಹಮ್ಮಿಗಿ ಬ್ಯಾರೇಜ್‌ಗೆ ಭೇಟಿ ನೀಡಿ ಪರಿಹಾರೋಪಾಯಗಳ ಬಗ್ಗೆ ಚರ್ಚಿಸಲಾಗುವುದು ಎಂದರು.

ಜಿಲ್ಲೆಯಲ್ಲಿ ಚುನಾವಣೆ ಪ್ರಕ್ರಿಯೆ ಅತ್ಯಂತ ಶಾಂತಿಯುತವಾಗಿ ನಡೆದಿದೆ. ಯಾವುದೇ ದೂರು ದಾಖಲಾಗದಂತೆ ಚುನಾವಣೆ ನಡೆದಿದೆ. ಅದಕ್ಕೆ ಕಾರಣರಾದ ಅಧಿಕಾರಿಗಳು, ಸಿಬ್ಬಂದಿ ಮತ್ತು ಪೊಲೀಸ್ ಇಲಾಖೆಯವರಿಗೆ ಸಚಿವರು ಧನ್ಯವಾದಗಳನ್ನು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಕಾಂಗ್ರೆಸ್ ಮುಖಂಡರಾದ ವಾಸಣ್ಣ ಕುರುಡಗಿ, ಬಿ.ಬಿ. ಅಸೂಟಿ, ಗುರಣ್ಣ ಬಳಗಾನೂರ, ಅಶೋಕ ಮಂದಾಲಿ, ಎಸ್.ಎನ್. ಬಳ್ಳಾರಿ, ಉಮರ್ ಫಾರೂಕ್ ಹುಬ್ಬಳ್ಳಿ ಮುಂತಾದವರು ಉಪಸ್ಥಿತರಿದ್ದರು.

> ಪ್ರಸಕ್ತ ಲೋಕಸಭೆ ಚುನಾವಣೆಯಲ್ಲಿ ಮಹಿಳೆಯರು ಹೆಚ್ಚಿನ ಪ್ರಮಾಣದಲ್ಲಿ ಮತದಾನದಲ್ಲಿ ಭಾಗಿಯಾಗಿದ್ದಾರೆ. ಯಾವುದೇ ಪಕ್ಷದ ಕಾರ್ಯಕರ್ತರು ಮತದಾನಕ್ಕೆ ಆಹ್ವಾನ ನೀಡುವುದಕ್ಕಿಂತ ಮುಂಚೆಯೇ ಸ್ವಯಂಪ್ರೇರಿತರಾಗಿ ಮತದಾನ ಮಾಡಿರುವುದು ಮತದಾರರು ಜಾಗೃತರಾಗಿದ್ದಾರೆ ಎಂಬುದಕ್ಕೆ ಸಾಕ್ಷಿಯಾಗಿದೆ. ಈ ಚುನಾವಣೆ ಗ್ಯಾರಂಟಿ ಯೋಜನೆಗಳ ಜನಾಭಿಪ್ರಾಯ ಸಂಗ್ರಹದ ಚುನಾವಣೆಯಾಗಿದೆ ಎಂದು ಸಚಿವ ಎಚ್. ಕೆ. ಪಾಟೀಲ ಅಭಿಪ್ರಾಯ ವ್ಯಕ್ತಪಡಿಸಿದರು.

### ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ ಸಭೆಯಲ್ಲಿ ಜಿಲ್ಲಾಧಿಕಾರಿ ಸೂಚನೆ

# ಕುಡಿಯುವ ನೀರು ಪೂರೈಕೆಗೆ ಪ್ರಥಮಾದ್ಯತೆ ನೀಡಿ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಗ್ರಾಮೀಣ ಹಾಗೂ ನಗರ ಪ್ರದೇಶದ ಸಾರ್ವಜನಿಕರಿಗೆ ಸಮರ್ಪಕ ಕುಡಿಯುವ ನೀರು ಪೂರೈಕೆಗೆ ಅಧಿಕಾರಿ ವರ್ಗ ಪ್ರಥಮಾದ್ಯತೆ ನೀಡಿ ಕಾರ್ಯನಿರ್ವಹಿಸುವಂತೆ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ನಿರ್ದೇಶನ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಕುಡಿಯುವ ನೀರು ನಿರ್ವಹಣೆ, ಮೇವಿನ ಪೂರೈಕೆ ಕುರಿತು ಜರುಗಿದ 'ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ' ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ಗ್ರಾಮೀಣ ಪ್ರದೇಶದಲ್ಲಿ ಕಾರ್ಯನಿರ್ವಹಿಸುವ ಸ್ಥಳೀಯ ಮಟ್ಟದ ಅಧಿಕಾರಿ, ಸಿಬ್ಬಂದಿಗಳು ಪರಿಸ್ಥಿತಿಗೆ ಅನುಗುಣವಾಗಿ ಜನಸಾಮಾನ್ಯರಿಗೆ ಕುಡಿಯುವ ನೀರಿನ ಪೂರೈಕೆಗೆ ಮುಂದಾಗಬೇಕು. ಜಲಮೂಲಗಳ ಸದ್ಬಳಕೆ ಮಾಡಿಕೊಂಡು ಸಾರ್ವಜನಿಕರಿಗೆ ಸಮರ್ಪಕ ನೀರು ಪೂರೈಸುವ ಜವಾಬ್ದಾರಿಯನ್ನು ಸರಿಯಾಗಿ ನಿರ್ವಹಿಸುವಂತೆ ಸೂಚಿಸಿದರು.

ಜಿಲ್ಲೆಯ ಸ್ಥಳೀಯ ಸಂಸ್ಥೆಗಳಲ್ಲಿ ವಾರ್ಡ್‌ವಾರು ನೀರು ಪೂರೈಕೆ ಕುರಿತು ಹಾಗೂ ಆಗುತ್ತಿರುವ ಅನಾನುಕೂಲಗಳ ಬಗ್ಗೆ ಗಮನ ಹರಿಸಿ ಕೂಡಲೇ ಸ್ಪಂದಿಸಿ ಕುಡಿಯುವ ನೀರಿನ ವ್ಯವಸ್ಥಿತ ಸರಬರಾಜಿಗೆ



ಮುಂದಾಗಬೇಕು. ಯಾವುದೇ ಕಾರಣಕ್ಕೂ ಕುಡಿಯುವ ನೀರು ಪೂರೈಕೆಯಲ್ಲಿ ನಿರ್ಲಕ್ಷ್ಯ ಧೋರಣೆಯನ್ನು ಸಹಿಸಲಾಗದು ಎಂದು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

ಜನಸಾಮಾನ್ಯರಿಗೆ ದೈನಂದಿನ ಬಳಕೆಗೆ ಹಾಗೂ ಕುಡಿಯಲು ಅಗತ್ಯವಿರುವ ನೀರು ಪೂರೈಕೆ ಜವಾಬ್ದಾರಿಯನ್ನು ಅಧಿಕಾರಿ ವರ್ಗ ಸರಿಯಾಗಿ ನಿರ್ವಹಿಸಬೇಕು. ಮೊದಲು ಸರ್ಕಾರಿ ವ್ಯಾಪ್ತಿಯ ಬೋರ್‌ವೆಲ್‌ಗಳನ್ನು ನೀರು ಪೂರೈಕೆಗೆ ಬಳಕೆ ಮಾಡಿಕೊಳ್ಳಬೇಕು. ಸಿಗದಿದ್ದಲ್ಲಿ ಖಾಸಗಿ ಒಡೆತನದ ಬೋರ್‌ವೆಲ್‌ಗಳನ್ನು ಬಳಸಿಕೊಳ್ಳಲು ಆದ್ಯತೆ ನೀಡುವಂತೆ ತಿಳಿಸಿದರು.

ಸರ್ಕಾರಿ ಹಾಗೂ ಖಾಸಗಿ ಮಾಲೀಕತ್ವದ ಬೋರ್‌ವೆಲ್‌ಗಳು ಸಿಗದಿದ್ದಲ್ಲಿ ಟ್ಯಾಂಕರ್ ಮೂಲಕ ನೀರು ಪೂರೈಕೆ ಮಾಡಬೇಕು. ಟ್ಯಾಂಕರ್ ಮೂಲಕ ನೀರು ಪೂರೈಕೆ ಮಾಡುವಾಗ ಸರ್ಕಾರದ ಮಾರ್ಗಸೂಚಿಗಳ ಪಾಲನೆಯೊಂದಿಗೆ ಅಧಿಕಾರಿ ವರ್ಗ ಕಾರ್ಯನಿರ್ವಹಿಸುವಂತೆ ಹೇಳಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಸುರೇಖಾ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಪ್ರಶಾಂತ ವರಗಪ್ಪನವರ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಮಾರುತಿ ಬ್ಯಾಕೋಡ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗದ ಕಾರ್ಯಪಾಲಕ ಅಭಿಯಂತರ ಎಸ್.ಆರ್. ಗೌಡರ, ನಗರಸಭೆ ಸಹಾಯಕ ಕಾರ್ಯಪಾಲಕ ಅಭಿಯಂತರ ಬಂಡಿವಡ್ಡರ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆ ಅಧಿಕಾರಿಗಳು, ಸ್ಥಳೀಯ ಸಂಸ್ಥೆಗಳ ಮುಖ್ಯಸ್ಥರು, ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳು ಹಾಜರಿದ್ದರು.

> ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್ ಮಾತನಾಡಿ, ಗ್ರಾಮೀಣ ಭಾಗದ ಜಾನುವಾರುಗಳಿಗೆ ಮೇವು ಪೂರೈಕೆ ಸರಿಯಾಗಿ ಆಗಲಿ. ಸಾರ್ವಜನಿಕರಿಗೆ ಅಗತ್ಯಕ್ಕೆ ತಕ್ಕಂತೆ ನೀರಿನ ಇತರ ಮೂಲಗಳನ್ನು ಬಳಕೆ ಮಾಡಿಕೊಂಡು ನೀರು ಪೂರೈಸಬೇಕು. ಗ್ರಾಮೀಣ ಪ್ರದೇಶದಲ್ಲಿ ಕುಡಿಯುವ ನೀರು ಪೂರೈಕೆ ಸಂಬಂಧಿಸಿದಂತೆ ಹಲವು ಕಡೆ ಖುದ್ದಾಗಿ ಭೇಟಿ ಪರಿಶೀಲಿಸಲಾಗುತ್ತಿದೆ. ತಾ.ಪಂ ಇ.ಒಗಳು ಕುಡಿಯುವ ನೀರು ಪೂರೈಕೆ ಬಗ್ಗೆ ವಿಶೇಷ ಗಮನಹರಿಸಬೇಕು ಎಂದು ಸೂಚಿಸಿದರು.

## ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಜಿಲ್ಲೆಗೆ 17ನೇ ಸ್ಥಾನ





■ ವಿಜಯಸಾಕ್ಷಿ ಸುದ್ದಿ, ಗದಗ

ಮಾರ್ಚ್-2024ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷಾ ಫಲಿತಾಂಶ ಪ್ರಕಟವಾಗಿದ್ದು, ಗದಗ ಜಿಲ್ಲೆಯಲ್ಲಿ ಪರೀಕ್ಷೆ ಬರೆದ 15545 ಮಕ್ಕಳಲ್ಲಿ 11621 ಮಕ್ಕಳು ಉತ್ತೀರ್ಣರಾಗಿ ಒಟ್ಟು ಫಲಿತಾಂಶ ಶೇ.74.76ರಷ್ಟು ದಾಖಲಾಗಿದೆ. ರಾಜ್ಯದಲ್ಲಿ ಗದಗ ಜಿಲ್ಲೆಯ ಸ್ಥಾನ-17 (ರಾಜ್ಯದ ಸರಾಸರಿ ಫಲಿತಾಂಶ ಶೇ. 73.40 ಆಗಿದೆ.

ಜಿಲ್ಲೆಯಲ್ಲಿ ಪರೀಕ್ಷೆಗೆ ಹಾಜರಾದ ಮಕ್ಕಳ ಸಂಖ್ಯೆ-15545, ಪರೀಕ್ಷೆಯಲ್ಲಿ ತೇರ್ಗಡೆಯಾದ ಮಕ್ಕಳ ಸಂಖ್ಯೆ-11621, ಶೇಕಡಾ ಸಾಧನೆ-74.76 ಆಗಿರುತ್ತದೆ. ಗದಗ ಜಿಲ್ಲೆಯಲ್ಲಿ ಒಟ್ಟು 304 ಶಾಲೆಗಳಲ್ಲಿ 138 ಸರಕಾರಿ ಪ್ರೌಢಶಾಲೆಗಳು, 102 ಅನುದಾನಿತ ಪ್ರೌಢಶಾಲೆಗಳು, 64 ಅನುದಾನರಹಿತ ಪ್ರೌಢಶಾಲೆಗಳ ವಿದ್ಯಾರ್ಥಿಗಳು ಪರೀಕ್ಷೆ ಎದುರಿಸಿದ್ದರು. ಬೆಟಗೇರಿಯ ಲೋಯಲಾ ಪ್ರೌಢಶಾಲೆಯ ಸಮೃದ್ಧಿ ಸಿದ್ದಲಿಂಗ್ 622 (99.52%) ಅಂಕಗಳೊಂದಿಗೆ ಜಿಲ್ಲೆಗೆ ಪ್ರಥಮ ಸ್ಥಾನ, ಶಿರಹಟ್ಟಿ ತಾಲೂಕಿನ ಲಿಟಲ್ ಹಾರ್ಟ್ಸ್ ಸ್ಕೂಲ್ ಲಕ್ಷ್ಮೇಶ್ವರದ ಪೂಜಾ ಕುರಟ್ಟಿ 620 (99.20%) ಅಂಕಗಳೊಂದಿಗೆ ಜಿಲ್ಲೆಗೆ ದ್ವಿತೀಯ ಸ್ಥಾನ ಹಾಗೂ ಶಿರಹಟ್ಟಿ ತಾಲೂಕಿನ ಲಿಟಲ್ ಹಾರ್ಟ್ಸ್ ಸ್ಕೂಲ್ ಲಕ್ಷ್ಮೇಶ್ವರದ ಅಮೃತ ಗಂಗಾಧರ ಶಿರಹಟ್ಟಿ 619 (99.04%) ಅಂಕಗಳೊಂದಿಗೆ ಜಿಲ್ಲೆಗೆ ತೃತೀಯ ಸ್ಥಾನ ಪಡೆದುಕೊಂಡಿದ್ದಾರೆ.

ಗದಗ ಜಿಲ್ಲೆಯಲ್ಲಿ 30 ಶಾಲೆಗಳು ಶೇ. 100ರಷ್ಟು ಫಲಿತಾಂಶ ಸಾಧಿಸಿದ್ದು, 23 ಶಾಲೆಗಳು ಶೇ. 40ಕ್ಕಿಂತ ಕಡಿಮೆ ಫಲಿತಾಂಶ ದಾಖಲಿಸಿವೆ ಎಂದು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ (ಆಡಳಿತ) ಎಂ.ಎ. ರಡ್ಡೇರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸಿಂಗಟಾಲೂರು ಬ್ಯಾರೇಜ್‌ಗೆ ಭೇಟಿ ನೀಡಿದ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ

# ತುರ್ತು ಕ್ಯಾಬಿನೆಟ್ ಸಭೆ ಕರೆಯಲು ಒತ್ತಾಯ

■ ವಿಜಯಸಾಕ್ಷಿ ಸುದ್ದಿ, ಗದಗ

ನದಿ ಪಾತ್ರಗಳಲ್ಲೂ ಕುಡಿಯುವ ನೀರಿನ ಕೊರತೆ ಉಲ್ಬಣಿಸಿದೆ. ಕುಡಿಯುವ ನೀರಿನ ಸಮಸ್ಯೆ ಹೆಚ್ಚಾಗಿರುವ ಕಾರಣ ತುರ್ತಾಗಿ ಕ್ಯಾಬಿನೆಟ್ ಸಭೆ ಕರೆಯುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಒತ್ತಾಯಿಸಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್. ಕೆ. ಪಾಟೀಲ ಹೇಳಿದರು.

ಜಿಲ್ಲೆಯ ಮುಂಡರಗಿ ತಾಲೂಕಿನ ಸಿಂಗಟಾಲೂರು ಬ್ಯಾರೇಜ್‌ಗೆ ಗುರುವಾರ ಭೇಟಿ ನೀಡಿದ ಅವರು, ಬ್ಯಾರೇಜ್‌ನಲ್ಲಿರುವ ನೀರಿನ ಲಭ್ಯತೆ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದು ಮಾತನಾಡಿದರು.

ಸದ್ಯದ ಮಾಹಿತಿ ಪ್ರಕಾರ ಭದ್ರಾ ಡ್ಯಾಂನಲ್ಲಿ ಕೇವಲ 8 ಟಿಎಂಸಿ ಅಡಿ ನೀರು ಮಾತ್ರ



ಇದೆ. ಅಲ್ಲಿಂದ ಸಿಂಗಟಾಲೂರು ಬ್ಯಾರೇಜ್‌ಗೆ ನೀರು ಹರಿಸುವಂತೆ ಕೋರಲಾಗಿದೆ. ನೀರಿನ ಸಮಸ್ಯೆ ಬಿಗಡಾಯಿಸಿದ್ದರಿಂದ ಚುನಾವಣೆ ಸಂದರ್ಭದಲ್ಲೂ ಸಾಕಷ್ಟು ಒತ್ತಡ ಹೇರಿದ್ದೆವು. ಆದರೆ, ಆ ಸಮಯದಲ್ಲಿ 0.4 ಟಿಎಂಸಿ ಅಡಿ ನೀರು ಮಾತ್ರ ಹರಿದು ಬಂದಿತ್ತು ಎಂದು ತಿಳಿಸಿದರು.

ಪ್ರಸ್ತುತ ಹಮ್ಮಿಗಿ ಬ್ಯಾರೇಜ್‌ನಲ್ಲಿ ನೀರಿನ ಲಭ್ಯತೆ-ಯ ಪ್ರಮಾಣ ತೀರಾ ಕಡಿಮೆ ಇದೆ. ಕುಡಿಯುವ ನೀರಿಗಾಗಿ ಡೆಡ್ ಸ್ಟೋರೇಜ್ ನೀರನ್ನು ಬಳಸಲಾಗುತ್ತಿದೆ. ನಾಲ್ಕು ಇಂಚಿನ 13 ಪಂಪ್‌ಗಳು ಸತತವಾಗಿ ಡೆಡ್ ಸ್ಟೋರೇಜ್‌ನಿಂದ ಅವಳಿ ನಗರಕ್ಕೆ ನೀರು ಪೂರೈಸುವ ಲಿಫ್ಟಿಂಗ್ ಪಾಯಿಂಟ್‌ಗೆ ಕಳಿಸುತ್ತಿವೆ. ಹಿಟಾಚಿಯಲ್ಲಿ ಹೂಳು ತೆಗೆಸಿ ಕಾಲುವೆ ಮೂಲಕ ಡೆಡ್ ಸ್ಟೋರೇಜ್ ಕೊನೆವರೆಗೆ ನೀರು ಪಡೆದುಕೊಳ್ಳುವ ಪ್ರಯತ್ನ ನಡೆಯುತ್ತಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಪ್ರಾಧಿಕಾರ ಮಾಜಿ ಅಧ್ಯಕ್ಷ ಪ್ರಭು ಬುರಬುರೆ, ನಗರಸಭೆ ಮಾಜಿ ಅಧ್ಯಕ್ಷ ಬಿ.ಬಿ. ಅಸೂಟಿ, ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ, ಎಸ್.ಎನ್. ಬಳ್ಳಾರಿ, ಉಮರಫಾರೂಖ್ ಹುಬ್ಬಳ್ಳಿ ಸೇರಿದಂತೆ ಗದಗ-ಬೆಟಗೇರಿ ನಗರಸಭೆ ಇಂಜಿನಿಯರ್‌ಗಳು, ಅಧಿಕಾರಿಗಳು ಹಾಜರಿದ್ದರು.

> ಹಮ್ಮಿಗಿ ಬ್ಯಾರೇಜ್‌ನಲ್ಲಿರುವ ನೀರು ಮುಂದಿನ 4ರಿಂದ 8ದಿನಗಳವರೆಗೆ ಬರಬಹುದು. ಬಳಿಕ ಮಳೆ ಆಗದಿದ್ದರೆ ನೀರಿನ ಕೊರತೆ ಉಂಟಾಗಲಿದೆ. ನೀರು ಅತ್ಯಮೂಲ್ಯವಾಗಿದ್ದು, ಯಾರೂ ನೀರನ್ನು ವ್ಯರ್ಥ ಮಾಡಬೇಡಿ ಎಂದು ಮನವಿ ಮಾಡಿದರಲ್ಲದೆ, ಮುಂದಿನ ದಿನಗಳಲ್ಲಿ ಮಳೆಯಾದರೆ ನೀರಿಗೆ ಸಮಸ್ಯೆ ಆಗಲಾರದು. ಕೆಟ್ಟು ಹೋಗಿರುವ ಕೊಳವೆಬಾವಿಗಳ ರಿಪೇರಿಗೆ ಕ್ರಮ ವಹಿಸಲಾಗಿದೆ ಎಂದು ಸಚಿವರು ಮಾಹಿತಿ ನೀಡಿದರು.

## ಸಂಪಾದಕೀಯ

# ವರಸೆ ಬದಲಿಸಿದ ಸೂಲಿಬೆಲೆ

ನಮೋ ಬ್ರಿಗೇಡ್ ಮೂಲಕ ರಾಜ್ಯಾದ್ಯಂತ ಸುಳ್ಳು ಹೇಳುತ್ತಲೇ ಪ್ರಧಾನಿ ನರೇಂದ್ರ ಮೋದಿ ಬೆಂಬಲಿಸುತ್ತಿದ್ದ, ಪ್ರಕರವಾದಿ ಚಕ್ರವರ್ತಿ ಸೂಲಿಬೆಲೆ ಕಾಂಗ್ರೆಸ್ ಪರವಾಗಿ ಆಡಿರುವ ಮಾತುಗಳು ಈಗ ಚರ್ಚೆಗೆ ಕಾರಣವಾಗಿದೆ.

ಕರ್ನಾಟಕದಲ್ಲಿ ನಡೆದ ಲೋಕಸಭೆ ಚುನಾವಣೆಯಲ್ಲಿ ಬಿಜೆಪಿ ಮನೆ ಮನಗಳನ್ನ ತಲುಪುವಲ್ಲಿ ವಿಫಲವಾಗಿದೆ. ಆದರೆ ಕಾಂಗ್ರೆಸ್ ಈ ಬಾರಿ ಪ್ರತಿಯೊಂದ ಮನೆಗೂ ತಲುಪಿ ತನ್ನ ಕಾರ್ಯಕ್ರಮಗಳನ್ನ ಹೇಳಿಕೊಂಡಿದೆ. ಈ ಹಿಂದಿನ ಎರಡು ಚುನಾವಣೆಗಳಿಗೆ ಹೋಲಿಕೆ ಮಾಡಿಕೊಂಡರೆ ಕಾಂಗ್ರೆಸ್ ಈ ಬಾರಿ ಜನರನ್ನ ತಲುಪಿದೆ ಎನ್ನುವುದನ್ನು ಚಕ್ರವರ್ತಿ ಸೂಲಿಬೆಲೆ ಒಪ್ಪಿಕೊಂಡಿದ್ದಾರೆ.

ಕಾಂಗ್ರೆಸ್ ವಿರುದ್ಧ ನಿರಂತರವಾಗಿ ವಾಗ್ದಾಳಿ ನಡೆಸಿದ ಚಕ್ರವರ್ತಿ ಸೂಲಿಬೆಲೆ, ಈಗ ಏಕಾಏಕಿ ಕಾಂಗ್ರೆಸ್ ತಂತ್ರಗಾರಿಕೆಯನ್ನ ಒಪ್ಪಿಕೊಂಡಿರುವುದನ್ನು ನೋಡಿದರೆ ಲೋಕಸಭೆ ಚುನಾವಣೆಯಲ್ಲಿ ಬದಲಾವಣೆ ಪರ್ವ ಆರಂಭವಾಗಿದೆ ಎನ್ನುವ ಸೂಚನೆ ಕಂಡುಬರುತ್ತಿದೆ.

ಚಕ್ರವರ್ತಿ ಸೂಲಿಬೆಲೆ ಮಾತ್ರವಲ್ಲದೆ ಪ್ರಧಾನಿ ನರೇಂದ್ರ ಮೋದಿಯು ಕೂಡ ಈಗ ಮುಸ್ಲಿಮರನ್ನು ಉಲ್ಲೇಖಿಸಿ ಆಡಿರುವ ಮಾತುಗಳು ಸಹ ಸಾಕಷ್ಟು ವೈರಲ್ ಆಗುತ್ತಿದೆ. ಇಷ್ಟು ದಿನ ಮುಸ್ಲಿಂ ವಿರೋಧಿ ಮಾತುಗಳನ್ನು ಆಡುತ್ತಿದ್ದ ಬಿಜೆಪಿಯ ಈ ಮುಖಂಡರು, ಮುಸ್ಲಿಂ ಓಲೈಕೆಯಲ್ಲಿ ನಿರತರಾಗಿರುವುದು ನೋಡಿದರೆ, ಉಳಿದಿರುವ ಲೋಕಸಭೆ ಕ್ಷೇತ್ರಗಳಲ್ಲಿ ಮುಸ್ಲಿಂ ಮತಗಳನ್ನು ಸೆಳೆಯುವ ತಂತ್ರ ಇರಬಹುದು. ಇಲ್ಲವೇ ದೇಶಾದ್ಯಂತ ಈ ಬಾರಿ ಬಿಜೆಪಿ ಸಂಖ್ಯೆ ಕಡಿತವಾಗುವ ಸೂಚನೆಗಳು ಸಿಕ್ಕಿರಬಹುದು.

ಸದ್ಯದ ಮಾಹಿತಿ ಪ್ರಕಾರ ಕೇಂದ್ರ ಗುಪ್ತಚರ ಇಲಾಖೆಯೂ ಸಹ ಅಬ್ ಕಿ ಬಾರ್ 400 ಪಾರ್ ಆಗುವುದಿಲ್ಲ. ಮೋದಿ ಮ್ಯಾಜಿಕ್ ನಡೆಯುವುದಿಲ್ಲ ಎನ್ನುವುದು ಸ್ಪಷ್ಟವಾಗಿದೆ. ಹೀಗಾಗಿ ಪರೋಕ್ಷವಾಗಿ ಬಿಜೆಪಿಯನ್ನು ಬೆಂಬಲಿಸುವಂತಹ ಚಕ್ರವರ್ತಿ ಸೂಲಿಬೆಲೆ, ಮತ್ತು ಪ್ರಧಾನಿ ನರೇಂದ್ರ ಮೋದಿ ಮುಸ್ಲಿಂ ಒಲೈಕೆಯಲ್ಲಿ ನಿರತರಾಗಿದ್ದಾರೆ.

ಇಷ್ಟು ದಿನ ದ್ವೇಷ ಕಾರಿದಂತಹ ಇಂತಹ ನಾಯಕರಿಂದ ಒಂದು ಸಮುದಾಯ ಬದಲಾಗುತ್ತದೆ ಎನ್ನುವುದು ಕನಸಿನ ಮಾತು. ಆದರೂ ಬಿಜೆಪಿ ತನ್ನ ಪ್ರಯತ್ನವನ್ನ ಮುಂದುವರಿಸಿರುವುದು ಆಶಾದಾಯಕ ಬೆಳವಣಿಗೆ ಎನ್ನಬಹುದು.

### ಇಂದು ಅಕ್ಷಯ ತೃತೀಯ ಹಬ್ಬದ ಆಚರಣೆ ನಿಮಿತ್ತ ವಿಶೇಷ ಲೇಖನ

# ಸಮೃದ್ಧತೆಗೆ ಹೆಸರಾದ ಅಕ್ಷಯ ತೃತೀಯ



ಹಿಂದೂ ಪಂಚಾಂಗದ ಪ್ರಕಾರ ಅಕ್ಷಯ ತೃತೀಯವು ಪವಿತ್ರವಾದ ಹಾಗೂ ವಿಶಿಷ್ಟವಾದ ಹಬ್ಬವಾಗಿದೆ. ವೈಶಾಖ ಮಾಸದ ಶುಕ್ಲ ಪಕ್ಷದ ಮೂರನೇ ದಿನ ತೃತೀಯದಂದು ಅಕ್ಷಯ ತೃತೀಯ ಹಬ್ಬವನ್ನು ಆಚರಿಸಲಾಗುವುದು. ಕ್ಷಯ ಎಂದರೆ ಕ್ಷಯಿಸುವಂತಹುದು. ಅಕ್ಷಯ ಎಂದರೆ ಎಂದಿಗೂ ಕ್ಷಯಿಸಲಾರದ ಹಾಗೂ ಎಂದಿಗೂ ನಾಶವಾಗದ ಎಂಬ ಅರ್ಥವನ್ನು ನೀಡುತ್ತದೆ. ಅಕ್ಷಯ ತೃತೀಯ ಹಬ್ಬವು ಸಮೃದ್ಧತೆಗೆ ಹೆಸರಾಗಿದ್ದು, ಈ ಸಂದರ್ಭದಲ್ಲಿ ನಾವು ಏನು ಮಾಡಿದರೂ ಅದನ್ನು ಅತ್ಯಧಿಕ ಪ್ರಮಾಣದಲ್ಲಿ ಪಡೆಯುತ್ತೇವೆ ಎಂಬ ನಂಬಿಕೆಯಿದೆ.

ಅಕ್ಷಯ ತೃತೀಯ ಹಬ್ಬವು ಸಾಡೇತೀನ್ ಮುಹೂರ್ತಗಳಲ್ಲೊಂದಾಗಿದೆ. ಯುಗಾದಿ ಪಾಡ್ಯ, ಅಕ್ಷಯ ತೃತೀಯ, ವಿಜಯದಶಮಿ (ಈ ಮೂರು ದಿವಸ) ಮತ್ತು ದೀಪಾವಳಿ ಪಾಡ್ಯ (ಅರ್ಧ ದಿವಸ) ಇವುಗಳು ಸಾಡೇತೀನ್ ಮುಹೂರ್ತಗಳೆನಿಸುತ್ತವೆ. ಈ ದಿವಸಗಳಂದು ಯಾವುದೇ ಹೊಸ ಕೆಲಸ ಪ್ರಾರಂಭಿಸಲು ಅಥವಾ ಖರೀದಿಗಾಗಿ ಪಂಚಾಂಗ ನೋಡುವ ಅವಶ್ಯಕತೆಯಿರುವುದಿಲ್ಲ ಎಂದು ಹೇಳಲಾಗುತ್ತದೆ.

ಈ ಶುಭ ದಿನದಂದು ಜನರು ದಾನ-ಧರ್ಮಗಳನ್ನು ಮಾಡುತ್ತಾರೆ. ವಿವಾಹ ಹಾಗೂ ಧಾರ್ಮಿಕ ಕಾರ್ಯಕ್ರಮಗಳಿಗೂ ಸಹ ಈ ದಿನ ಬಹಳ ಪ್ರಶಸ್ತವಾಗಿದೆ. ಅಕ್ಷಯ ತೃತಿಯ ಹಬ್ಬವು ಕೆಲವೊಂದು ಪೌರಾಣಿಕ ಕಥೆಗಳನ್ನೂ ಸಹ ಹೊಂದಿದೆ. ಭಗವಾನ್ ವಿಷ್ಣುವು ಪರಶುರಾಮರ ಅವತಾರವನ್ನು ತಾಳಿದ್ದು ಇದೇ ದಿವಸವಾಗಿದೆ. ಜಮದಗ್ನಿ ಋಷಿಯ ಮತ್ತು ರೇಣುಕೆಯ ಮಗನಾಗಿ ಬ್ರಾಹ್ಮಣ ಕುಲದಲ್ಲಿ ಪರಶುರಾಮರು ಜನಿಸುತ್ತಾರೆ. ಪರಶುರಾಮರು ಅಧರ್ಮದ ನಾಶ ಮಾಡಿ ಧರ್ಮ ಸಂಸ್ಥಾಪನೆಗೆ ಕಾರಣರಾಗುತ್ತಾರೆ.

ತಮ್ಮ ಪೂರ್ವಜರಿಗೆ ಮುಕ್ತಿಯನ್ನು ದೊರಕಿಸುವುದಕ್ಕೋಸ್ಕರ ಭಗೀರಥ ಮಹಾರಾಜನು ಗಂಗೆಯನ್ನು ಕುರಿತು ತನ್ನ ಕಠಿಣ ತಪಸ್ಸಿನ ಮುಖಾಂತರ ಭೂಮಿಗೆ ಬರಮಾಡಿಕೊಂಡಿದ್ದು ಸಹ ಈ ಶುಭದಿನದಂದು ಎಂಬ ಪ್ರತೀತಿ ಇದೆ. ಈ ದಿನ ಗಂಗಾ ಸ್ನಾನ ಮಾಡಿದರೆ ಸಕಲ ಪಾಪಗಳ ನಿವಾರಣೆಯಾಗುತ್ತದೆ ಎಂದು ಹೇಳಲಾಗುತ್ತದೆ. ಅನ್ನಪೂರ್ಣೆ ದೇವಿಯು ಸಮೃದ್ಧತೆಯ ಸಂಕೇತವೆನಿಸಿದ್ದಾರೆ. ಅನ್ನಪೂರ್ಣೆಯು ಪಾರ್ವತಿ ದೇವಿಯ ಅಂಶವಾಗಿದ್ದು, ಎಲ್ಲ ಆಹಾರ-ಪದಾರ್ಥಗಳಿಗೆ ಆಕೆಯ ಕೃಪೆಯಾದರೆ ಸಾಕು. ಅಕ್ಷಯ ತೃತೀಯದಂದು ಈ ದೇವಿಯ ಜನನ ತಾಳಿದ್ದಾಳೆ ಎಂಬ ಪ್ರತೀತಿ ಇದೆ. ಆದ್ದರಿಂದ ಅಕ್ಷಯ ತೃತಿಯದಂದು ಈ ದೇವಿಗೆ ವಿಶೇಷ ಪೂಜೆ ಸಲ್ಲಿಸಲಾಗುತ್ತದೆ.

ಮಹಾಭಾರತದಲ್ಲಿ ಕೂಡ ಅಕ್ಷಯ ತೃತೀಯ ದಿನದ ವಿಶೇಷತೆಯಿದೆ. ಯುಧಿಷ್ಠಿರನಿಗೆ ಅಕ್ಷಯ ಪಾತ್ರೆ ದೊರೆತಿದ್ದು ಇದೇ ದಿನದಂದು. ಪಾಂಡವರು ಕೌರವರೊಂದಿಗೆ ಪಗಡೆಯಾಟದಲ್ಲಿ ಸೋತಾಗ ದ್ರೌಪದಿಯ ವಸ್ತ್ರಾಪಹರಣದ ಸಂದರ್ಭದಲ್ಲಿ ದ್ರೌಪದಿಯು ಆರ್ತಳಾಗಿ ಕೃಷ್ಣ ಪರಮಾತ್ಮನನ್ನು ಬೇಡಿಕೊಂಡಾಗ ಆಕೆಯ ಮಾನವನ್ನು ಶ್ರೀ ಕೃಷ್ಣನು ರಕ್ಷಿಸುತ್ತಾನೆ ಮತ್ತು ಅವಳ ವಸ್ತ್ರವು ಅಕ್ಷಯವಾಗುತ್ತದೆ. ಈ ದಿನ ಕೂಡ ಅಕ್ಷಯ ತೃತಿಯವಾಗಿತ್ತು.

ಕೃಷ್ಣನ ಬಾಲ್ಯದ ಗೆಳೆಯನಾದ ಸುಧಾಮನು ಬಡತನ ಅನುಭವಿಸುತ್ತಿದ್ದನು. ಅವನು ತನ್ನ ಸ್ನೇಹಿತನಾದ ಕೃಷ್ಣನ ಹತ್ತಿರ ಸಹಾಯ ಯಾಚಿಸುವುದಕ್ಕಾಗಿ ದ್ವಾರಕೆಯಲ್ಲಿನ ಕೃಷ್ಣನ ಅರಮನೆಗೆ ಭೇಟಿ ನೀಡುತ್ತಾನೆ. ಆದರೆ ಮುಜುಗರದಿಂದ ಕೃಷ್ಣನೊಂದಿಗೆ ತನ್ನ ಬಡತನದ ಯಾತನೆಯನ್ನು ತೋಡಿಕೊಳ್ಳಲು ಸುಧಾಮನಿಗೆ ಆಗುವುದಿಲ್ಲ. ಆದರೆ ಶ್ರೀ ಕೃಷ್ಣ ಪರಮಾತ್ಮನು ತನ್ನ ಗೆಳೆಯ ಸುಧಾಮನ ನಿಷ್ಕಲ್ಮಶ ಮನಸ್ಸು ಹಾಗೂ ಭಕ್ತಿಯನ್ನು ಬಲ್ಲವನಾಗಿದ್ದು, ಅವನು ಏನೂ ಯಾಚಿಸದಿದ್ದರೂ ಸಹ ಅವನ ಬಡತನ ನೀಗಿಸಿ ಸಿರಿ ಸಂಪತ್ತನ್ನು ಪರಿಪಾಲಿಸುತ್ತಾನೆ. ಆ ದಿನವೂ ಸಹ ಅಕ್ಷಯ ತೃತೀಯ ಆಗಿತ್ತು ಎಂದು ಹೇಳಲಾಗುತ್ತದೆ.


ಅಕ್ಷಯ ತೃತೀಯ ದಿನದಂದು ಮನೆಗಳನ್ನು ಸ್ವಚ್ಛಗೊಳಿಸಿ ತಳಿರು-ತೋರಣಗಳಿಂದ ಸಿಂಗರಿಸುತ್ತಾರೆ. ಅಂಗಳವನ್ನು ಬಣ್ಣ ಬಣ್ಣದ ರಂಗವಲ್ಲಿಯ ಚಿತ್ತಾರದಿಂದ ಅಲಂಕರಿಸುತ್ತಾರೆ. ಈ ಶುಭ ದಿನದಂದು ಧಾರ್ಮಿಕ ವಿಧಿ-ವಿಧಾನಗಳಿಂದ ಭಕ್ತರುಗಳು ಭಗವಾನ್ ವಿಷ್ಣು, ಲಕ್ಷ್ಮೀದೇವಿಯ ಹಾಗೂ ತಮ್ಮ ಇಷ್ಟ ದೇವರುಗಳನ್ನು ಪೂಜಿಸುತ್ತಾರೆ. ಸಿಹಿ ತಿಂಡಿಗಳನ್ನು ಸವಿಯುತ್ತಾರೆ. ಕುಟುಂಬದವರೆಲ್ಲರೂ ಹೊಸ ಬಟ್ಟೆಗಳನ್ನು ಧರಿಸಿ ದೇವಸ್ಥಾನಗಳಿಗೆ ತೆರಳಿ ಗುರು-ಹಿರಿಯರ ಆಶೀರ್ವಾದ ಪಡೆಯುತ್ತಾರೆ. ಈ ಶುಭ ದಿನದಂದು ಮಾರುಕಟ್ಟೆಯಲ್ಲಿ ಹೊಸ ಬಟ್ಟೆಗಳ ಹಾಗೂ ಆಭರಣಗಳ ಖರೀದಿ ಸಹ ಜೋರಾಗಿರುತ್ತದೆ.

ಒಟ್ಟಾರೆಯಾಗಿ,ಇಂದಿನ ಯಾಂತ್ರಿಕ ಯುಗದಲ್ಲಿಯೂ ತಮಗೆ ಲಭ್ಯವಿರುವ ಸಮಯದಲ್ಲಿಯೇ ಕುಟುಂಬದ ಸದಸ್ಯರೊಂದಿಗೆ ಹಬ್ಬಗಳನ್ನು ಸಂತೋಷದಿಂದ ಆಚರಿಸಿ ಸಂಭ್ರಮಿಸುವಂತಾಗಲಿ. ಧಾರ್ಮಿಕ ಹಾಗೂ ಸಾಂಸ್ಕೃತಿಕ ಪರಂಪರೆಗಳ ಆಚರಣೆಯು ಎಲ್ಲರಿಗೂ ಹರುಷ ತರಲಿ.

**– ಅಂಜನಾ ರಾಘವೇಂದ್ರ ಕುಬೇರ,**
ಗದಗ.

## ಪನ್ನೂನ್ ಹತ್ಯೆಯ ಸಂಚಿನ ಹಿಂದೆ ಭಾರತವಿದೆ ಎಂಬುದಕ್ಕೆ ಯಾವುದೇ ಪುರಾವೆಗಳಿಲ್ಲ: ರಷ್ಯಾ

■ ವಿಜಯಸಾಕ್ಷಿ ಸುದ್ದಿ, ರಷ್ಯಾ



ಖಲಿಸ್ತಾನಿ ಪರ ತೀವ್ರಗಾಮಿ ಗುರ್ಪತ್‌ವಂತ್ ಸಿಂಗ್ ಪನ್ನೂನ್ ವಿರುದ್ಧ ವಿಫಲವಾದ ಹತ್ಯೆ ಸಂಚಿನ ಹಿಂದೆ ಭಾರತದ ಮೇಲೆ ಅಮೆರಿಕದ ಆರೋಪಗಳನ್ನು ತಳ್ಳಿಹಾಕಿರುವ ರಷ್ಯಾದ ವಿದೇಶಾಂಗ ಸಚಿವಾಲಯ, "ಈ ಪ್ರಕರಣದಲ್ಲಿ ಭಾರತೀಯ ನಾಗರಿಕರು ಭಾಗಿಯಾಗಿರುವ ಬಗ್ಗೆ ವಾಷಿಂಗ್ಟನ್ ಇನ್ನೂ ಯಾವುದೇ ವಿಶ್ವಾಸಾರ್ಹ ಪುರಾವೆಗಳನ್ನು ಒದಗಿಸಿಲ್ಲ" ಎಂದು ಹೇಳಿದೆ.

"ನಮಗಿರುವ ಮಾಹಿತಿಯ ಪ್ರಕಾರ, ಜಿಎಸ್ ಪನ್ನೂನ್ ಹತ್ಯೆಯ ಸಂಚಿನಲ್ಲಿ ಭಾರತೀಯ ನಾಗರಿಕರ ಪಾಲ್ಗೊಳ್ಳುವಿಕೆಯ ಬಗ್ಗೆ ವಾಷಿಂಗ್ಟನ್ ಇನ್ನೂ ಯಾವುದೇ ವಿಶ್ವಾಸಾರ್ಹ ಪುರಾವೆಗಳನ್ನು ಒದಗಿಸಿಲ್ಲ. ಸಾಕ್ಷ್ಯಾಧಾರಗಳ ಅನುಪಸ್ಥಿತಿಯಲ್ಲಿ ಈ ವಿಷಯದ ಬಗ್ಗೆ ಊಹಾಪೋಹಗಳು ಸ್ವೀಕಾರಾರ್ಹವಲ್ಲ" ಎಂದು ರಷ್ಯಾದ ವಿದೇಶಾಂಗ ಸಚಿವಾಲಯದ ಅಧಿಕೃತ ವಕ್ತಾರ ಮಾರಿಯಾ ಜಖರೋವಾ ಬುಧವಾರ (ಸ್ಥಳೀಯ ಸಮಯ) ಹೇಳಿದರು.

ಯುಎಸ್ ರಾಷ್ಟ್ರೀಯ ಮನಸ್ಥಿತಿಯನ್ನು ಅರ್ಥಮಾಡಿಕೊಳ್ಳುವುದಿಲ್ಲ, ಹಾಗೆಯೇ ಭಾರತದ ಅಭಿವೃದ್ಧಿಯ ಐತಿಹಾಸಿಕ ಸಂದರ್ಭವನ್ನು ಅರ್ಥಮಾಡಿಕೊಳ್ಳುವುದಿಲ್ಲ ಮತ್ತು ಅದು ಭಾರತವನ್ನು ಒಂದು ಪ್ರಭುತ್ವವಾಗಿ ಅಗೌರವಿಸುತ್ತದೆ ಎಂದು ಅವರು ಹೇಳಿದರು.

ವಿಫಲವಾದ "ಹತ್ಯೆ" ಸಂಚಿನಲ್ಲಿ ಭಾರತೀಯ ಅಧಿಕಾರಿಯ ವಿರುದ್ಧದ ಆರೋಪಗಳಿಗೆ ಮಾಸ್ಕೋದ ಪ್ರತಿಕ್ರಿಯೆಯ ಕುರಿತು ಮಾಧ್ಯಮದ ಪ್ರಶ್ನೆಗೆ ಜಖರೋವಾ ಅವರ ಹೇಳಿಕೆಗಳು ಮತ್ತು ಅಮೆರಿಕದ ಸುದ್ದಿ ಪ್ರಕಟಣೆ 'ದಿ ವಾಷಿಂಗ್ಟನ್ ಪೋಸ್ಟ್'ನಲ್ಲಿ ಭಾರತವು ಅದರ ಶತ್ರುವಿನ ವಿರುದ್ಧ ರಷ್ಯಾ ಮತ್ತು ಸೌದಿ ಅರೇಬಿಯಾ ರೀತಿಯಲ್ಲಿಯೇ ಮಾಡಲು ಪ್ರಯತ್ನಿಸುತ್ತಿದೆ ಎಂದು ಹೇಳಿದೆ.

"ನವದೆಹಲಿಯ ವಿರುದ್ಧ ಯುನೈಟೆಡ್ ಸ್ಟೇಟ್ಸ್‌ನ ನಿಯಮಿತ ಆಧಾರರಹಿತ ಆರೋಪಗಳು (ಅವರು ಭಾರತವನ್ನು ಮಾತ್ರವಲ್ಲದೆ ಇತರ ಹಲವು ದೇಶಗಳ ಬಗ್ಗೆಯೂ ಆಧಾರರಹಿತವಾಗಿ ಆರೋಪಿಸುತ್ತಾರೆ) ಧಾರ್ಮಿಕ ಸ್ವಾತಂತ್ರ್ಯವನ್ನು ಉಲ್ಲಂಘಿಸಿದ್ದಾರೆಂದು ಯುನೈಟೆಡ್ ಸ್ಟೇಟ್ಸ್‌ನ ರಾಷ್ಟ್ರೀಯ ಮನಸ್ಥಿತಿಯ ತಪ್ಪುಗ್ರಹಿಕೆಯ ಪ್ರತಿಬಿಂಬವಾಗಿದೆ.


### ಶಿರಸಿಯ 473 ಅಡಿಕೆ ಬೆಳೆಗಾರರಿಗೆ ವಿಮಾ ಹಣ, ನಷ್ಟ ಪರಿಹಾರ ಕೊಡಲು ತೀರ್ಪು

## ಎಸ್.ಬಿ.ಐ ವಿಮಾ ಕಂಪನಿಯಿಂದ ಸೇವಾ ನ್ಯೂನತೆ

■ ವಿಜಯಸಾಕ್ಷಿ ಸುದ್ದಿ, ಧಾರವಾಡ

ಶಿರಸಿಯ ನೀಲಕುಂದ, ತಂಡಾಗುಡಿ ಪ್ರದೇಶದ ಅಡಿಕೆ ಬೆಳೆಗಾರ ರೈತರು 2017-18ರಲ್ಲಿ ಅಡಿಕೆ ಬೆಳೆಯನ್ನು ಬೆಳೆದಿದ್ದರು. ಆ ಬೆಳೆಗೆ ರೈತರು/ದೂರುದಾರರು ಕೆನರಾ ಕೋ-ಆಪ್‌ರೇಟಿವ್ ಸಂಘದೊಂದಿಗೆ ಎಸ್.ಬಿ.ಐನ ವಿಮಾ ಕಂಪನಿಗೆ ತಮ್ಮ ಅಡಿಕೆ ಬೆಳೆಗೆ 2017-18ರ ವರ್ಷಕ್ಕೆ ವಿಮೆ ಮಾಡಿಸಿದ್ದರು. ಮಳೆ ನಿಗದಿಗಿಂತ ಜಾಸ್ತಿಯಾಗಿ ಅತಿವೃಷ್ಟಿಯಾದರೆ ಆ ರೈತರು ವಿಮೆ ಪರಿಹಾರ ಪಡೆಯಲು ಅರ್ಹತೆ ಹೊಂದಿದ್ದರು.

ಜುಲೈ-2017ರಲ್ಲಿ ತಮ್ಮ ಬಾಗದಲ್ಲಿ ನಿರಂತರವಾಗಿ 4 ದಿವಸ 59 ಎಮ್‌ಎಮ್‌ಗಿಂತ ಹೆಚ್ಚಿನ ಮಳೆ ಆದ ಕಾರಣ ತಮ್ಮ ಅಡಿಕೆ ಬೆಳೆ ನಾಶವಾಗಿ ರೈತರಿಗೆ ಆರ್ಥಿಕ ತೊಂದರೆ ಮತ್ತು ಹಾನಿಯಾಗಿದೆ. ಕಾರಣ ವಿಮಾ ಪಾಲಿಸಿಯ ನಿಯಮದಂತೆ ತಮಗೆ ಬೆಳೆ ಹಾನಿ ಮತ್ತು ಪರಿಹಾರ ಕೊಡಲು 1ನೇ ಎದುರುದಾರ ಎಸ್.ಬಿ.ಐ ವಿಮಾ ಕಂಪನಿಗೆ ಹಲವ ಬಾರಿ ಕೇಳಿಕೊಂಡರೂ ಅವರು ತಮಗೆ ವಿಮಾ ಹಣ ಅಥವಾ ಪರಿಹಾರ ಕೊಟ್ಟಿಲ್ಲ. ಅಂತಹ ವಿಮಾ ಕಂಪನಿಯವರ ನಡಾವಳಿಕೆ ಗ್ರಾಹಕರ ರಕ್ಷಣಾ ಕಾಯ್ದೆ ಅಡಿ ಸೇವಾ ನ್ಯೂನತೆ




ಆಗುತ್ತದೆ ಎಂದು ವಿಮಾ ಕಂಪನಿ ಮತ್ತು ಇತರೆಯವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ಒಟ್ಟು 473 ರೈತರು ಧಾರವಾಡದ ಜನಾದೇಶ ಗ್ರಾಹಕರ ಸ್ವಯಂ ಸೇವಾ ಸಂಘದ ಮೂಲಕ 27/05/2022ರಂದು ಧಾರವಾಡ ಜಿಲ್ಲಾ ಗ್ರಾಹಕರ ಆಯೋಗಕ್ಕೆ ದೂರು ಸಲ್ಲಿಸಿದ್ದರು.


ಈ ದೂರಿನ ಬಗ್ಗೆ ಆಯೋಗದ ಅಧ್ಯಕ್ಷ ಈಶಪ್ಪ ಭೂತೆ, ವಿಶಾಲಾಕ್ಷಿ ಅ.ಬೋಳಶೆಟ್ಟಿ ಹಾಗೂ ಪ್ರಭು ಸಿ. ಹಿರೇಮಠ ಕೂಲಂಕುಷವಾಗಿ ವಿಚಾರಣೆ ನಡೆಸಿದರು. ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದವರು ದೂರುದಾರರ ಸ್ಥಳಗಳಲ್ಲಿ ಅಗತ್ಯಕ್ಕಿಂತ ಹೆಚ್ಚು ಮಳೆ ಬಿದ್ದ ಬಗ್ಗೆ ವರದಿ ಕೊಡಬೇಕಾಗಿತ್ತು. ಆದರೆ ಅವರು 2017-18ನೇ ಇಸವಿಯಲ್ಲಿ 6.7ನಷ್ಟು ಮಳೆಯಾಗಿದೆ ಎಂದು ವರದಿ ಕೊಟ್ಟಿದ್ದರಿಂದ ದೂರುದಾರರು ಪ್ರಕೃತಿ ವಿಕೋಪದ ಆಧಾರದಲ್ಲಿ ವಿಮೆ ಪರಿಹಾರ ಪಡೆಯಲು ಅರ್ಹರಲ್ಲ ಎಂದು 1ನೇ ಎದುರುದಾರ/ಎಸ್.ಬಿ.ಐ. ವಿಮಾ ಕಂಪನಿಯವರು ಆಕ್ಷೇಪಣೆ ಎತ್ತಿದ್ದರು.

ಅತಿ ಹೆಚ್ಚು ಮಳೆಯಾಗಿದ್ದರೂ ಮಳೆ ಮಾಪನ ಕೇಂದ್ರಗಳು ಕಡಿಮೆ ಮಳೆ ದಾಖಲಿಸಿಕೊಂಡಿದ್ದ ಪ್ರಸಂಗದಲ್ಲಿ ಅಕ್ಕಪಕ್ಕ ಮಳೆ ಮಾಪನ ಕೇಂದ್ರಗಳ ವರದಿಗಳನ್ನು ಆಧರಿಸಿ 1ನೇ ಎದುರುದಾರ ವಿಮಾ ಕಂಪನಿಯವರು ದೂರುದಾರರ ವಿಮಾ ಅರ್ಜಿಗಳನ್ನು ಪರಿಶೀಲಿಸಿ ವಿಮಾ ಹಣಕೊಡಬೇಕು ಅನ್ನುವುದು ರಾಜ್ಯ ಸರ್ಕಾರದ ನಿಯಮ. ಈ ಪ್ರಕರಣದಲ್ಲಿ ಜುಲೈ-2017ರಲ್ಲಿ ದೂರುದಾರರ ಏರಿಯಾದಲ್ಲಿ ಅತೀ ಹೆಚ್ಚು ಮಳೆಯಾಗಿದೆ. ಆದರೆ ತಾಂತ್ರಿಕ ದೋಷದಿಂದ ಅಲ್ಲಿಯ ಮಳೆ ಮಾಪನ ಕೇಂದ್ರದಲ್ಲಿ 6.7 ಎಂದು ದಾಖಲಾಗಿದೆ. ಮೇಲೆ ಹೇಳಿದ ರಾಜ್ಯ ಸರ್ಕಾರದ ನಿರ್ದೇಶನದಂತೆ ಪಕ್ಕದ ಮಳೆ ಮಾಪನ ಕೇಂದ್ರದಲ್ಲಿ 72 ಎಮ್.ಎಮ್‌ಗಿಂತ ಹೆಚ್ಚು ಮಳೆಯಾದ ಬಗ್ಗೆ ದಾಖಲೆ ಇದ್ದು, ಅದನ್ನು ಆಧರಿಸಿ ವಿಮಾ ಕಂಪನಿಯವರು ದೂರುದಾರರಿಗೆ ಬೆಳೆ ವಿಮೆ ಪರಿಹಾರ ಕೊಡಬೇಕಾಗಿತ್ತು.

ಆದರೆ ಆ ರೀತಿ ಮಾಡದೇ ದೂರುದಾರರ ವಿಮಾ ಕೋರಿಕೆಯ ಬಗ್ಗೆ ಏನನ್ನೂ ಹೇಳದೆ ಎದುರುದಾರ/ಎಸ್.ಬಿ.ಐ ವಿಮಾ ಸಂಸ್ಥೆಯವರು ಕರ್ತವ್ಯ ಲೋಪ ಎಸಗಿ ಗ್ರಾಹಕರ ರಕ್ಷಣಾ ಕಾಯ್ದೆ ಅಡಿ ಸೇವಾ ನ್ಯೂನತೆ ಎಸಗಿದ್ದಾರೆಂದು ಆಯೋಗ ಅಭಿಪ್ರಾಯಪಟ್ಟು ತೀರ್ಪು ನೀಡಿದೆ.

> ಒಟ್ಟು 473 ರೈತರು/ದೂರುದಾರರು ಇದ್ದು ಅವರಿಗೆ 12 ಲಕ್ಷ 78 ಸಾವಿರ ರೂ ವಿಮಾ ಹಣ ಮತ್ತು ಅದರ ಮೇಲೆ ದೂರು ದಾಖಲಾದ ದಿನದಿಂದ ಶೇ.8ರಂತೆ ಪೂರ್ತಿ ಹಣ ಸಂದಾಯವಾಗುವವರೆಗೆ ಲೆಕ್ಕ ಹಾಕಿ ಕೊಡುವಂತೆ ಆಯೋಗ ಎಸ್.ಬಿ.ಐ ವಿಮಾ ಕಂಪನಿಗೆ ನಿರ್ದೇಶಿಸಿದೆ. ಎಲ್ಲ 473 ದೂರುದಾರ/ರೈತರಿಗೆ ಆಗಿರುವ ಅನಾನುಕೂಲ ಹಾಗೂ ಮಾನಸಿಕ ಹಿಂಸೆಗಾಗಿ ತಲಾ 2 ಸಾವಿರ ರೂ.ನಂತೆ ಒಟ್ಟು ರೂ. 9 ಲಕ್ಷ 46 ಸಾವಿರ ಪರಿಹಾರ ನೀಡುವಂತೆ ಆಯೋಗ ವಿಮಾ ಕಂಪನಿಗೆ ಆದೇಶಿಸಿದೆ. ಒಟ್ಟು ರೂ.30 ಸಾವಿರ ಪ್ರಕರಣಗಳ ಖರ್ಚು-ವೆಚ್ಚ ನೀಡಲು ಸಹ ಆಯೋಗ ವಿಮಾ ಕಂಪನಿಗೆ ತಿಳಿಸಿದೆ.

## 'ಅವರು ಅದಾನಿ-ಅಂಬಾನಿ ಬಗ್ಗೆ ಮಾತನಾಡುತ್ತಿರುವುದು ಪವಾಡ ; ಮೋದಿ ವಿರುದ್ಧ ಉದ್ಧವ್ ಠಾಕ್ರೆ ಕಿಡಿ



■ ವಿಜಯಸಾಕ್ಷಿ ಸುದ್ದಿ, ಮುಂಬಯಿ

'ಪ್ರಧಾನಿ ಮೋದಿಯವರು ಅದಾನಿ-ಅಂಬಾನಿ ಬಗ್ಗೆ ಮಾತನಾಡಲು ಪ್ರಾರಂಭಿಸಿರುವುದು ಪವಾಡ' ಎಂದು ಹೇಳಿರುವ ಶಿವಸೇನೆ (ಯುಬಿಟಿ) ಮುಖ್ಯಸ್ಥ ಉದ್ಧವ್ ಠಾಕ್ರೆ, "ಜೂನ್ 4 ರಂದು ಮತ ಎಣಿಕೆಯ ನಂತರ ಪ್ರಧಾನಿ ನರೇಂದ್ರ ಮೋದಿ ಅವರು ಕಚೇರಿಯಲ್ಲಿ ಉಳಿಯುವುದಿಲ್ಲ" ಎಂದು ವಾಗ್ದಾಳಿ ನಡೆಸಿದರು.

'ಇಂದು ನಾನು ವೀಡಿಯೊವನ್ನು ನೋಡಿದೆ. ಇದನ್ನು ಎಐ ಬಳಸಿ ತಯಾರಿಸಲಾಗಿದೆ ಎಂದು ನಾನು ಭಾವಿಸಿದೆ. ಇಲ್ಲ, ಪ್ರಧಾನಿ ಮೋದಿಯೇ ಮಾತನಾಡುತ್ತಿದ್ದರು. ಅವರು ಅದಾನಿ ಮತ್ತು ಅಂಬಾನಿ ಬಗ್ಗೆ ಮಾತನಾಡಲು ಪ್ರಾರಂಭಿಸಿದ್ದಾರೆ. ಇದೊಂದು ಪವಾಡ! ಮೋದಿಗೆ ಅದಾನಿ ಮತ್ತು ಅಂಬಾನಿ ಮೇಲೆ ಕೋಪವಿದ್ದರೆ ಅವರಿಗೆ ನೀಡಿರುವ ವಿಮಾನ ನಿಲ್ದಾಣವನ್ನು ವಾಪಸ್ ತೆಗೆದುಕೊಳ್ಳುತ್ತಾರಾ" ಎಂದು ಮಾವಲ್ ಲೋಕಸಭಾ ಕ್ಷೇತ್ರದ ಸಾಂಗ್ವಿಯಲ್ಲಿ ಪಕ್ಷದ ಅಭ್ಯರ್ಥಿ ಸಂಜೋಗ್ ವಾಘರೆ ಅವರ ಪರ ನಡೆದ ರ್ಯಾಲಿಯಲ್ಲಿ ಠಾಕ್ರೆ ಹೇಳಿದರು.

"ಧಾರವಿ ಯೋಜನೆಯ ಮೂಲಕ ಇಡೀ ಮುಂಬೈಯನ್ನು ಅದಾನಿಗಳ ಕೈಗೆ ನೀಡಲಾಗುತ್ತಿದೆ. ಮೊದಲಿಗೆ, ಯೋಜನೆಯನ್ನು ರದ್ದುಗೊಳಿಸುವ ಆದೇಶವನ್ನು ಪ್ರಧಾನಿ ಹೊರಡಿಸಬೇಕು ಮತ್ತು ನಂತರ ಮಾತನಾಡಬೇಕು " ಎಂದು ಠಾಕ್ರೆ ಆಗ್ರಹಿಸಿದರು.

'ಪ್ರಧಾನಿಯವರ ಅವಧಿ ಮುಗಿಯುವ ಹಂತದಲ್ಲಿದೆ' ಎಂದು ಹೇಳಿದ ಠಾಕ್ರೆ, "2014 ಮತ್ತು 2019ರ ಲೋಕಸಭೆ ಚುನಾವಣೆಗಳಲ್ಲಿ ಪ್ರಸ್ತಾಪಿಸಿದ ವಿಷಯಗಳನ್ನೇ ಈಗ ಪ್ರಸ್ತಾಪಿಸಲಾಗುತ್ತಿದೆ. ಆಡಳಿತ ಪಕ್ಷಗಳಿಗೆ ಪ್ರಸ್ತಾಪಿಸಲು ಯಾವುದೇ ಸಮಸ್ಯೆಗಳಿಲ್ಲ. ದೇಶದ ಜನತೆ ತಮ್ಮ ಭವಿಷ್ಯವನ್ನು ಈಗಾಗಲೇ ನಿರ್ಧರಿಸಿದ್ದಾರೆ. ಮೋದಿ ರೋಡ್ ಶೋ ಮಾಡುತ್ತಿದ್ದಾರೆ, ಜನರನ್ನು ರಸ್ತೆಗೆ ಕರೆತಂದಿದ್ದಾರೆ. ಜೂನ್ 4 ರಂದು, ಮೋದಿ ನೋಟು ರದ್ದತಿಯನ್ನು ಜಾರಿಗೆ ತಂದ ರೀತಿಯಲ್ಲಿ, ಅದೇ ರೀತಿಯಲ್ಲಿ, ಅವರು ಪ್ರಧಾನಿಯಾಗಿ ಉಳಿಯುವುದಿಲ್ಲ. ಆದರೆ, ನರೇಂದ್ರ ಮೋದಿಯಾಗಿ ಉಳಿಯುತ್ತಾರೆ" ಎಂದು ಠಾಕ್ರೆ ತೀವ್ರ ವಾಗ್ದಾಳಿ ನಡೆಸಿದರು.

### ಜಂತ್ಲಿಯ ಕೆರೆಕೋಡಿ ಬಸವೇಶ್ವರ ದೇವಾಲಯದ ಜಾತ್ರಾ ಮಹೋತ್ಸವದ ವಿಶೇಷ ಲೇಖನ

# 'ಸಿರಿವೂರು' ಜಂತ್ಲಿಯ ಐತಿಹ್ಯ

ಕನ್ನಡ ನಾಡಿನ ಪ್ರತಿಯೊಂದು ಗ್ರಾಮಗಳು ಚಾರಿತ್ರಿಕ ಮತ್ತು ಸಾಂಸ್ಕೃತಿಕವಾಗಿ ವಿಫುಲ ಸಾಮಗ್ರಿಗಳನ್ನು ಒಳಗೊಂಡಿವೆ. ಇಲ್ಲಿಯ ಆಕರಗಳು ಈ ನಾಡಿನ ಸಮಗ್ರ ಇತಿಹಾಸ ರಚನೆಗೆ ಪೂರಕವಾಗಿವೆ. ಹೀಗಿದ್ದರೂ ಜಂತ್ಲಿಶಿರೂರ ಗ್ರಾಮವು ಪುರಾತತ್ವದ ದೃಷ್ಟಿಯಿಂದ ಮೌಖಿಕ ಕಥನ/ಐತಿಹ್ಯ, ರಾಜಕೀಯ, ದೇವಾಲಯ, ಶಾಸನ, ಶಿಲ್ಪ, ಆಡಳಿತ ಮುಂತಾದ ಹಲವು ಚಾರಿತ್ರಿಕ ಅಂಶಗಳ ದೃಷ್ಟಿಯಿಂದ ಮಹತ್ವವುಳ್ಳದ್ದಾಗಿದೆ. ಈ ಗ್ರಾಮಕ್ಕೆ ಹೊಂದಿಕೊಂಡಿರುವ ಲಕ್ಕುಂಡಿ, ಡಂಬಳ, ಪೇಠಾಲೂರು, ಕವಲೂರು, ಲಕ್ಷ್ಮೇಶ್ವರ ಇವು ಐತಿಹಾಸಿಕ ಪ್ರಸಿದ್ಧಿಯನ್ನು ಪಡೆದ ನೆಲೆಗಳಾಗಿವೆ.

ಈ ಗ್ರಾಮದ ಪರಿಸರದಲ್ಲಿ ಬನವಾಸಿ ಕದಂಬರು, ಬಾದಾಮಿ ಚಾಲುಕ್ಯರು, ಗಂಗರು, ರಾಷ್ಟ್ರಕೂಟರು, ಕಲ್ಯಾಣ ಚಾಲುಕ್ಯರು, ಕಲಚೂರ್ಯರು, ಹೊಯ್ಸಳರು, ಯಾದವರು ಮತ್ತು ವಿಜಯನಗರ ಅರಸರು ಆಳ್ವಿಕೆಮಾಡಿದ ಉದಾಹರಣೆಗಳಿವೆ. ಆ ಕಾಲದಲ್ಲಿ ಜಂತ್ಲಿಶಿರೂರ ಗ್ರಾಮವು ಜೈನ, ಶೈವ, ವೈಷ್ಣವ ಧರ್ಮಗಳ ನೆಲೆವೀಡಾಗಿತ್ತು. ಪ್ರಸ್ತುತ ಧಾರ್ಮಿಕ ಕ್ಷೇತ್ರದಲ್ಲಿ ಚಿಕ್ಕೇನಕೊಪ್ಪದ ಚನ್ನವೀರ ಶರಣರ ಮಠವು ಖ್ಯಾತಿಯನ್ನು ಪಡೆದಿದೆ.

ಮುಂಡರಗಿ ತಾಲೂಕಿನ ಗ್ರಾಮವಾದ ಜಂತ್ಲಿ ಶಿರೂರ ಮುಂಡರಗಿಯಿಂದ ವಾಯುವ್ಯಕ್ಕೆ 20 ಕಿ.ಮೀ ಹಾಗೂ ಗದಗನಿಂದ ಆಗ್ನೇಯಕ್ಕೆ 23 ಕಿ.ಮೀ ದೂರದಲ್ಲಿದೆ. ಈ ಊರು ಪ್ರಾಚೀನ ಶಾಸನಗಳಲ್ಲಿ 'ಸಿರಿವೂರು' ಎಂದೇ ಉಲ್ಲೇಖಿತಗೊಂಡಿದ್ದು, ಹಿಂದೆ ಮಾಸವಾಡಿ-140ಕ್ಕೆ ಸೇರಿತ್ತು. ಇಲ್ಲಿಂದ ಈವರೆಗೆ ಕಲ್ಯಾಣರ ಚಾಲುಕ್ಯ



ಹಾಗೂ ಯಾದವ ಅರಸರಿಗೆ ಸೇರಿದ 8 ಶಾಸನಗಳು ವರದಿಯಾಗಿವೆ. ಇವುಗಳಲ್ಲಿ ಬ್ರಹ್ಮದೇವರ ಗುಡಿಯ ಬಾಗಿಲವಾಡದ ಮೇಲಿರುವ ಕ್ರಿ.ಶ. 1042ರ ಶಾಸನವು 1ನೇ ಸೋಮೇಶ್ವರನ ಕಾಲಕ್ಕೆ ಸೇರಿದ್ದು, ಕುಂಚವಡುಗ ದಾಸಯ್ಯನು 'ಸಿರಿವೂರಿನ' ಸಿರಿವಾಗಿಲು ನಿರ್ಮಿಸಿ ದಾನಬಿಟ್ಟ ವಿಷಯವನ್ನು ತಿಳಿಸಿದೆ.

ಗ್ರಾಮದ ಹೊರವಲಯದಲ್ಲಿ ಮಹಾಬಳೇಶ್ವರ ದೇವಾಲಯವಿದೆ. ಪೂರ್ವಾಭಿಮುಖವಾಗಿರುವ ಈ ಗುಡಿಯಲ್ಲಿ ಕೇವಲ ಗರ್ಭಗುಡಿ ಹಾಗೂ ಅಂತರಾಳಗಳು ಮಾತ್ರ ಉಳಿದಿದ್ದು, ಗರ್ಭಗುಡಿ ಎದುರಿಗೆ ಇತ್ತೀಚೆಗೆ ನಂದಿಗುಡಿಯನ್ನು ನಿರ್ಮಿಸಿದ್ದಾರೆ. ಅಲ್ಲಿಯೇ ಇರುವ ಕ್ರಿ.ಶ. 1291ರ ಶಾಸನವೊಂದು ಇದನ್ನು ಸ್ವಯಂಭೂಲಿಂಗ ದೇವಾಲಯವೆಂದೇ ಕರೆದಿದೆ. ಅಂತರಾಳದ ಬಾಗಿಲವಾಡದಲ್ಲಿ ಗಜಲಕ್ಷ್ಮೀವಿದೆ. ಇದು ನಾಗರ ಶಿಖರವನ್ನು ಹೊಂದಿದೆ. ರಾಷ್ಟ್ರಕೂಟರ ಕಾಲದ ಕಂಬ (10ನೇ ಶತಮಾನದ) ವೀರಗಲ್ಲು, ಶಾಸನಕಲ್ಲು, ಸಪ್ತಮಾತೃಕೆಯ ಪಟ್ಟಿಕೆ, ಮಹಿಷಮರ್ಧಿನಿ, ತೀರ್ಥಂಕರರು ಹಾಗೂ ಕಿರಣ ಸ್ತಂಬಗಳ ಭಗ್ನಾವಶೇಷಗಳು ಇವೆ.

ಈ ಗ್ರಾಮವು ಗದಗ ನಗರದಿಂದ ಆಗ್ನೇಯಕ್ಕೆ ಮತ್ತು ಹುಬ್ಬಳ್ಳಿ-ಬಳ್ಳಾರಿ ರಾಷ್ಟ್ರೀಯ ಹೆದ್ದಾರಿ-63ರ ಅನತಿ ದೂರದಲ್ಲಿ ಜಂತ್ಲಿಶಿರೂರ ಗ್ರಾಮವು ಕಂಡುಬರುತ್ತದೆ. ಈ ಗ್ರಾಮದ ಕ್ಷೇತ್ರದ ಸುತ್ತಳತೆಯು ನಾಲ್ಕು ಕಿ.ಮೀ ಇದ್ದು, 2001-02ರ ಜನಗಣತಿಯ ಪ್ರಕಾರ ಸುಮಾರು 7500ರಷ್ಟು ಜನಸಂಖ್ಯೆಯನ್ನು ಹೊಂದಿದೆ.

ಜಂತ್ಲಿಶಿರೂರ ಗ್ರಾಮವು ಶಾಸನಗಳಲ್ಲಿ 'ಸಿರಿವೂರು' ಎಂದು ಉಲ್ಲೇಖಗೊಂಡಿದೆ. ಸಿರಿ ಎಂದರೆ ಸಂಪತ್ತು, ಊರೂ ಎಂದರೆ ಗ್ರಾಮ ಅಂದರೆ ಸಿರಿ ಸಂಪತ್ತಿನಿಂದ ಕೂಡಿದ ಗ್ರಾಮ ಜಂತ್ಲಿ ಶಿರೂರು ಆಗಿತ್ತು. ಇನ್ನೊಂದು ಐತಿಹ್ಯ ಏನೆಂದರೆ, ಈ ಊರಿನ



ಪ್ರಾಚೀನ ಹೆಸರು ಜಂತಕಲ್ಲ ಆಗಿತ್ತು ಎಂಬುದು ಇಲ್ಲಿನ ಜನರ ಅಭಿಪ್ರಾಯ. ಅಂದರೆ ಜಂತಕಲ್ಲ ಮಹಾರಾಜ ಈ ಊರನ್ನು ಆಳುತ್ತಿದ್ದನು. ಅವನ ಮರಣದ ತರುವಾಯ ಜಂತಕಲ್ಲ ಆಗಿ ನಂತರ ಜಂತ್ಲಿ ಆಗಿರಬಹುದೆಂದು ಉಹಿಸಬಹುದಾಗಿದೆ.

**– ಡಾ. ಶಂಕರ್ ಎಂ.ಬಡಿಗೇರ.**
ಸಂಶೋಧಕರು.

> ಜಂತ್ಲಿಯ ಪ್ರಮುಖ ದೇವಾಲಯವೆಂದರೆ, ಕೆರೆಕೋಡಿ ಬಸವೇಶ್ವರ ದೇವಾಲಯ. ಈ ದೇವಾಲಯದ ಜಾತ್ರಾ ಮಹೋತ್ಸವದ ಅಂಗವಾಗಿ ಮೇ.10ರಂದು ಸಂಜೆ 6ಗಂಟೆಗೆ ರಥೋತ್ಸವ ಜರಗುವುದು. ಶ್ರೀ ಗೆಳೆಯರ ಬಳಗ ಹವ್ಯಾಸಿ ಕಲಾವೃಂದ ಜಂತಲಿ ಇವರ ವತಿಯಿಂದ ರಾತ್ರಿ 10.30ಕ್ಕೆ 'ಮಗ ಹೋದರು ಮಾಂಗಲ್ಯ ಬೇಕು' (ಅರ್ಥಾತ್: ಹೆತ್ತವಳ ಹಾಲು ವಿಷವಾಯಿತು) ಎಂಬ ಸುಂದರ ಸಮಾಜಿಕ ನಾಟಕ ಪ್ರದರ್ಶನ ಜರುಗುವುದು.
>
> ಮೇ.11ರಂದು ಸಂಜೆ 6.30 ಲಘು ರಥೋತ್ಸವ ಜರಗುವುದು. ಶ್ರೀಮದ್ ಜಗದ್ಗುರು ರೇವಣಸಿದ್ದೇಶ್ವರ ನವ ತರುಣರ ನಾಟ್ಯ ಸಂಘ ಜಂತಲಿ ಇವರಿಂದ ರಾತ್ರಿ 9.15ಕ್ಕೆ 'ಭಂಡ ಪುಂಡರಿಗೆ ಬಹದ್ದೂರ ಗಂಡು' (ಅರ್ಥಾತ್: ಕೆಮ್ಮಿದವರಿಗೆ ಕೆರಳಿನಿಂತ ಟಗರು) ಎಂಬ ಸುಂದರ ಸಮಾಜಿಕ ನಾಟಕ ಜರಗುವುದು.

ರಾಷ್ಟ್ರೀಯ ಭಾವೈಕ್ಯತಾ ಶಿಬಿರಕ್ಕೆ ಚಾಲನೆ ನೀಡಿದ ಜಿ.ಎಸ್. ಸಂಗ್ರೇಶಿ

# ಉತ್ತಮ ಶಿಕ್ಷಣದಿಂದ ಸಮಾಜದಲ್ಲಿ ಬದಲಾವಣೆ

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ನೈಸರ್ಗಿಕ ವಿಕೋಪಗಳು ಹಾಗೂ ತುರ್ತು ಸಂದರ್ಭಗಳಲ್ಲಿ ಎನ್‌ಎಸ್‌ಎಸ್ ಸ್ವಯಂ ಸೇವಕರು ಸೇವೆ ಮಾಡಿದ್ದಾರೆ. ಎನ್‌ಎಸ್‌ಎಸ್ ಸ್ವಯಂ ಸೇವಕರು ಸಾಮಾಜಿಕ ಸೇವೆ ಮಾಡುವಲ್ಲಿ ತಮ್ಮನ್ನು ತಾವು ತೊಡಗಿಸಿಕೊಳ್ಳುವಲ್ಲಿ ಮುಂದಾಗಬೇಕು ಎಂದು ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಇಲಾಖೆಯ ಪ್ರಧಾನ ಕಾರ್ಯದರ್ಶಿ ಜಿ.ಎಸ್. ಸಂಗ್ರೇಶಿ ಹೇಳಿದರು.

ಗುರುವಾರ ನವನಗರದ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ರಾಜ್ಯ ಎನ್‌ಎಸ್‌ಎಸ್ ಕೋಶ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಎನ್‌ಎಸ್‌ಎಸ್‌ನ ಪ್ರಾದೇಶಿಕ ನಿರ್ದೇಶನಾಲಯ ಹಾಗೂ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನೆ ಸಹಯೋಗದೊಂದಿಗೆ ಆಯೋಜಿಸಿದ್ದ 2024ನೇ ಸಾಲಿನ ರಾಷ್ಟ್ರೀಯ ಭಾವೈಕ್ಯತಾ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವಿದ್ಯಾರ್ಥಿಗಳು ವಿದ್ಯಾಭ್ಯಾಸದ ಜೊತೆಗೆ ಸಮಾಜಕ್ಕೆ ಕೊಡುಗೆ ನೀಡಲು ಮುಂದಾಗಬೇಕು. ಉತ್ತಮ ಶಿಕ್ಷಣದ ಮೂಲಕ ಸಮಾಜದಲ್ಲಿ ಮಹತ್ತರ ಬದಲಾವಣೆ ತರಬಹುದು. ಶಿಕ್ಷಕರು



ಮತ್ತು ವಿದ್ಯಾರ್ಥಿಗಳ ನಡುವೆ ಅವಿನಾಭಾವ ಸಂಬಂಧವನ್ನು ಹೊಂದಬೇಕಾಗಿದೆ. ಪ್ರೊ. ಎಂ.ಬಿ. ದಿಲ್‌ಷಾದ್ ಅವರು ಎನ್‌ಎಸ್‌ಎಸ್‌ನ ಬೆಳವಣಿಗೆಗೆ ಶ್ರಮಿಸಿದ್ದಾರೆ. ರಾಷ್ಟ್ರೀಯ ಭಾವೈಕ್ಯತಾ ಶಿಬಿರವು ವಿದ್ಯಾರ್ಥಿಗಳನ್ನು ಒಗ್ಗೂಡಿಸುತ್ತಿದೆ. ಈ ಶಿಬಿರದಲ್ಲಿ ಬೇರೆ ಬೇರೆ ರಾಜ್ಯದ 150ಕ್ಕೂ ಅಧಿಕ ಎನ್‌ಎಸ್‌ಎಸ್ ಶಿಬಿರಾರ್ಥಿಗಳು ಭಾಗವಹಿಸಿದ್ದಾರೆ. ಎಲ್ಲರಿಗೂ ಜೀವನದಲ್ಲಿ ಯಶಸ್ಸು ದೊರೆಯಲಿ ಎಂದು ಹಾರೈಸಿದರು.

ಬೆಂಗಳೂರು ವಿಶ್ವವಿದ್ಯಾಲಯದ ಪ್ರಾಧ್ಯಾಪಕರಾದ ಪ್ರೊ. ಸತೀಶಗೌಡ ಎನ್ ಮಾತನಾಡಿ, ಪ್ರಶಸ್ತಿಗಳು ನಿಮ್ಮನ್ನು ಹುಡುಕಿಕೊಂಡು ಬರಬೇಕೇ ಹೊರತು ಪ್ರಶಸ್ತಿಗಾಗಿ ಸೇವೆ ಸಲ್ಲಿಸಬಾರದು. ಜನರಿಗೆ ತಿಳುವಳಿಕೆ ಮೂಡಿಸಲು ಎನ್‌ಎಸ್‌ಎಸ್ ಮುಖ್ಯ ವೇದಿಕೆಯಾಗಿದೆ. ಗ್ರಾಮಗಳ ಉದ್ಧಾರ, ಪರಿಸರ ಅಭಿವೃದ್ಧಿ ಉದ್ದೇಶವನ್ನು ಎನ್‌ಎಸ್‌ಎಸ್ ಹೊಂದಿದೆ ಎಂದರು.

ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ಕುಲಪತಿ ಡಾ.ಸಿ. ಬಸವರಾಜು ಅಧ್ಯಕ್ಷತೆ ವಹಿಸಿ ಮಾತನಾಡಿ, ಉತ್ತಮ ಸಮಾಜ ನಿರ್ಮಾಣಕ್ಕೆ ಎನ್‌ಎಸ್‌ಎಸ್ ಅವಶ್ಯಕವಾಗಿದೆ. ನಾವೆಲ್ಲರೂ ಒಂದು ಎನ್ನುವ ಭಾವನೆ ನಮ್ಮೆಲ್ಲರಲ್ಲಿ ಮೂಡಬೇಕಿದೆ. ಎಲ್ಲರಲ್ಲಿ ಸಾಮರಸ್ಯ ಹುಟ್ಟು ಹಾಕುವುದೇ ಎನ್‌ಎಸ್‌ಎಸ್‌ನ ಉದ್ದೇಶವಾಗಿದೆ. ಭಾರತೀಯ ಸಂಸ್ಕೃತಿಯನ್ನು ಉಳಿಸಿಕೊಂಡು ಹೋಗಬೇಕಿದೆ ಎಂದರು.

ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ಡೀನ್ ಪ್ರೊ. ಜಿ.ಬಿ. ಪಾಟೀಲ, ಮೌಲ್ಯಮಾಪನ ಕುಲಸಚಿವೆ ಪ್ರೊ. ರತ್ನಾ ಭರಮಗೌಡರ, ಎನ್‌ಎಸ್‌ಎಸ್ ಸಂಯೋಜಕ ಐ.ಬಿ. ಬಿರಾದಾರ, ಸಹಾಯಕ ಸಂಯೋಜಕರಾದ ದೀಪಾ ಸೇರಿದಂತೆ ವಿವಿಧ ರಾಜ್ಯಗಳ ಎನ್‌ಎಸ್‌ಎಸ್ ಸಂಯೋಜಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಪ್ರಮತಿ ಪ್ರಾರ್ಥಿಸಿ, ಎನ್‌ಎಸ್‌ಎಸ್ ಗೀತೆ ಹಾಡಿದರು. ಭುವನೇಶ್ವರಿ ಸ್ವಾಗತಿಸಿ, ಪರಿಚಯಿಸಿದರು. ಅಪರ್ಣಾ ನಿರೂಪಿಸಿದರು. ಮಾನಸಿ ವಂದಿಸಿದರು.

> ರಾಜ್ಯ ಎನ್‌ಎಸ್‌ಎಸ್ ಕೋಶದ ರಾಜ್ಯ ಎನ್‌ಎಸ್‌ಎಸ್ ಅಧಿಕಾರಿ ಡಾ. ಪ್ರತಾಪ್ ಲಿಂಗಯ್ಯ ಮಾತನಾಡಿ, ವಿವಿಧ ಸಂಸ್ಕೃತಿಗಳ ಸಂಗಮವನ್ನು ಭಾರತದಲ್ಲಿ ಕಾಣಬಹುದು. ಬೇರೆ ಬೇರೆ ಧರ್ಮಗಳು ಇಲ್ಲಿದ್ದರೂ ಸಹ ವಿವಿಧತೆಯಲ್ಲಿ ಏಕತೆಯನ್ನು ಹೊಂದಲಾಗಿದೆ. ಆಹಾರ ಪದ್ಧತಿ, ವೇಷಭೂಷಣ, ಭಾಷೆಗಳು ಸಹ ಸಾಕಷ್ಟಿದ್ದರೂ ನಾವೆಲ್ಲರೂ ಒಂದಾಗಿದ್ದೇವೆ. ವಿದ್ಯಾರ್ಥಿಗಳನ್ನು ಸಮಾಜದಲ್ಲಿ ಜವಾಬ್ದಾರಿಯುತ ನಾಗರಿಕರನ್ನಾಗಿ ಮಾಡುವಲ್ಲಿ ಎನ್‌ಎಸ್‌ಎಸ್ ಪ್ರಮುಖ ಪಾತ್ರ ವಹಿಸುತ್ತದೆ ಎಂದರು.

SSLC ಫಲಿತಾಂಶ ಪ್ರಕಟ

## ಬಾಗಲಕೋಟೆ ವಿದ್ಯಾರ್ಥಿನಿ ಅಂಕಿತ ಬಸಪ್ಪಗೆ 625ಕ್ಕೆ 625 ಅಂಕ: ರಾಜ್ಯಕ್ಕೆ ಏಕೈಕ ಪ್ರಥಮ!

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು



ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿಯು ಇಂದು 8.69 ಲಕ್ಷ ವಿದ್ಯಾರ್ಥಿಗಳ ಎಸ್‌ಎಸ್‌ಎಲ್‌ಸಿ ರಿಸಲ್ಟ್ ಅನ್ನು ಬಿಡುಗಡೆ ಮಾಡಿದ್ದು, ಈ ಬಾರಿಯೂ ಬಾಲಕಿಯರೇ ಮೈಲುಗೈ ಸಾಧಿಸಿದ್ದಾರೆ. ಅದರಲ್ಲಿಯೂ ಬಾಗಲಕೋಟೆ ವಿದ್ಯಾರ್ಥಿನಿ ಅಂಕಿತಾ ಬಸಪ್ಪ ಕೊನ್ನೂರು 625/625ಕ್ಕೆ ಅಂಕ ಪಡೆದುಕೊಳ್ಳುವ ಮೂಲಕ ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದಿದ್ದಾರೆ.

ಎಸ್ ಎಸ್ ಎಲ್ ಸಿ ಟಾಪರ್ಸ್

1. ಅಂಕಿತಾ ಬಸಪ್ಪ, ಬಾಗಲಕೋಟೆ– 625/625 ( ರಾಜ್ಯಕ್ಕೆ ಏಕೈಕ ಪ್ರಥಮ)
2. ಹರ್ಷಿತಾ ಡಿಎಂ, ಮಧುಗಿರಿ– 624/625
3. ಮೇದಾ ಪಿ.ಶೆಟ್ಟಿ, ಬೆಂಗಳೂರು– 624/625
4. ಚಿನ್ಮಯ್, ದಕ್ಷಿಣ ಕನ್ನಡ– 624/625
5. ಸಿದ್ದಾಂತ್, ಚಿಕ್ಕೋಡಿ – 624/625
6. ದರ್ಶನ್, ಚಿನ್ಮಯ್,ಶ್ರೀರಾಮ್,ಶಿರಸಿ–624/625

ಬೆಂಗಳೂರಿನ ಮಲ್ಲೇಶ್ವರಂ 6ನೇ ಅಡ್ಡರಸ್ತೆಯ ಕಚೇರಿಯಲ್ಲಿ ಫಲಿತಾಂಶ ಕುರಿತು ಸುದ್ದಿಗೋಷ್ಠಿ ನಡೆಸುವ ಮೂಲಕ ಫಲಿತಾಂಶ ಬಿಡುಗಡೆ ಮಾಡಿದೆ.

ಮಲಪ್ರಭಾ ಕಾಲುವೆಗೆ ಮೇ 14ರಿಂದ 23ರವರೆಗೆ ನೀರು: ಜಿಲ್ಲಾಧಿಕಾರಿ ದಿವ್ಯ ಪ್ರಭು

# ಕುಡಿಯುವ ನೀರಿನ ಸಮಸ್ಯೆ ನಿವಾರಣೆ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಮೇ 14ರಿಂದ 23ರವರೆಗೆ ನವಿಲುತೀರ್ಥ ಜಲಾಶಯದಿಂದ ಮಲಪ್ರಭಾ ಹಾಗೂ ನರಗುಂದ ಶಾಖಾ ಕಾಲುವೆ ಮೂಲಕ ನವಲಗುಂದ ಅಣ್ಣಿಗೇರಿ, ಹುಬ್ಬಳ್ಳಿ ಹಾಗೂ ಕುಂದಗೋಳ ತಾಲೂಕು ವ್ಯಾಪ್ತಿಯ 58 ಕುಡಿಯುವ ನೀರಿನ ಕೆರೆಗಳನ್ನು ತುಂಬಿಸಲಾಗುವುದೆಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಹೇಳಿದರು.

ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಈ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಬರಗಾಲದ ನಡುವೆ ಬಿಸಿಲಿನ ತಾಪ ಹೆಚ್ಚಾಗುತ್ತಿದ್ದು, ಜನ-ಜಾನುವಾರುಗಳಿಗೆ ಕುಡಿಯುವ ನೀರಿಗೆ ತೊಂದರೆಯಾಗದಂತೆ 10 ದಿನಗಳ ಕಾಲ ನಿರಂತರ ಮಲಪ್ರಭಾ ಬಲದಂಡೆ ಕಾಲುವೆಗಳಿಂದ 0.5 ಟಿಎಂಸಿ (600 ಕ್ಯೂಸೆಕ್ಸ್) ನೀರನ್ನು ನಾಲ್ಕು ತಾಲೂಕುಗಳ 58 ಕೆರೆಗಳಿಗೆ ಬಿಡಲಾಗುವುದು.

ನವಲಗುಂದ ತಾಲೂಕಿನ 37 ಕೆರೆ, ಅಣ್ಣಿಗೇರಿಯ 13, ಹುಬ್ಬಳ್ಳಿಯ 7 ಹಾಗೂ ಕುಂದಗೋಳದ 3 ಪೂರಕ ಸಂಗ್ರಹಣಾ ಕೆರೆಗಳನ್ನು ಭರ್ತಿ ಮಾಡಲಾಗುವುದು. ಆಯಾ ತಾಲೂಕಿನ




ತಹಸೀಲ್ದಾರರು, ತಾಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ, ನೀರಾವರಿ ಇಲಾಖೆ ಎಇಇಗಳು ಕ್ರಿಯಾಶೀಲರಾಗಿ ನಿಗಾ ವಹಿಸಿತಕ್ಕದ್ದು ಎಂದು ಅವರು ತಿಳಿಸಿದರು.

ಕಾಲುವೆಗೆ ಹರಿಸಲಾದ ನೀರು ಕೇವಲ ಕುಡಿಯುವ ನೀರಿಗೆ ಮಾತ್ರ ಬಳಕೆಯಾಗಬೇಕು. ಕುಡಿಯುವ ನೀರು ಹೊರತುಪಡಿಸಿ ಇನ್ಯಾವುದೇ ಉದ್ದೇಶಕ್ಕಾಗಿ ಬಳಕೆಯಾಗದಂತೆ ಸಂಬಂಧಿಸಿದ ಅಧಿಕಾರಿಗಳು ತೀವ್ರ ನಿಗಾ ವಹಿಸಬೇಕು ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು. ನೀರಾವರಿ ಇಲಾಖೆ, ಕಂದಾಯ ಇಲಾಖೆ, ಹೆಸ್ಕಾಂ, ಪೊಲೀಸ್ ಹಾಗೂ ಗ್ರಾಮೀಣ ಕುಡಿಯುವ ನೀರು ವಿಭಾಗಗಳ ಅಧಿಕಾರಿಗಳು ಹಾಗೂ ಸಿಬ್ಬಂದಿಗಳ ಮೂರು ತಂಡಗಳನ್ನು ಮೂರು ಶಿಫ್ಟ್‌ಗಳಲ್ಲಿ ಕಾರ್ಯನಿರ್ವಹಿಸಲು ಸೂಚಿಸಲಾಯಿತು. ನಾಲ್ಕು ತಾಲೂಕುಗಳ 7 ಉಪ ವಿಭಾಗಗಳ ಸುಮಾರು 90 ಕಿ.ಮೀ. ವ್ಯಾಪ್ತಿಯ ಕಾಲುವೆ ಸುತ್ತ ಯಾವುದೇ ತೊಂದರೆಯಾಗದಂತೆ ನಿಗಾ ವಹಿಸಿ ಕ್ರಿಯಾಶೀಲರಾಗಿ ಕೆಲಸ ಮಾಡಬೇಕು ಎಂದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ, ಉಪವಿಭಾಗಾಧಿಕಾರಿ ಶಾಲಂ ಹುಸೇನ, ಜಿ.ಪಂ ಉಪಕಾರ್ಯದರ್ಶಿ ವಿಜಯಕುಮಾರ ಅಜೂರ, ಮಲಪ್ರಭಾ ಯೋಜನಾ ವಲಯದ ಸೂಪರಿಂಟೆಂಡೆಂಟ್ ಇಂಜಿನಿಯರ್ ಡಾ. ಎಸ್.ಬಿ. ಮಲ್ಲಿಗವಾಡ, ಬ್ಯಾಹಟ್ಟಿ ವಿಭಾಗದ ಇಇ ಮನೋಹರ ಬಿಸ್ನಾಳ, ಗ್ರಾಮೀಣ ಕುಡಿಯುವ ನೀರು ಸರಬರಾಜು ವಿಭಾಗದ ಇಇ ಆರ್.ಎಂ. ಸೊಪ್ಪಿಮಠ ಸೇರಿದಂತೆ ವಿವಿಧ ಅಧಿಕಾರಿಗಳು ಉಪಸ್ಥಿತರಿದ್ದರು.

> ಬರಗಾಲ ಸ್ಥಿತಿಯಾಗಿರುವುದರಿಂದ 58 ಕೆರೆಗಳನ್ನು ಸಂಪೂರ್ಣ ಭರ್ತಿ ಮಾಡಲಾಗುವುದು. ಕುಡಿಯುವ ನೀರು ಹೊರತುಪಡಿಸಿ ಬೇರೆ ಉದ್ದೇಶಕ್ಕೆ ನೀರು ಬಳಕೆಯಾಗದಂತೆ ಆಯಾ ವ್ಯಾಪ್ತಿಯ ನೀರಾವರಿ ಇಲಾಖೆಯ ಸಹಾಯಕ ಅಭಿಯಂತರರು, ಪಿಡಿಓ ಗ್ರಾಮಲೆಕ್ಕಿಗರು, ಪೊಲೀಸ್ ಸಿಬ್ಬಂದಿ ತಮ್ಮ ವ್ಯಾಪ್ತಿಯಲ್ಲಿ ಚುರುಕಾಗಿ ಕಾರ್ಯನಿರ್ವಹಿಸಬೇಕೆಂದರು. ಹೆಸ್ಕಾಂ ಅಧಿಕಾರಿಗಳು ನೀರು ಹರಿಸುವ ಸಮಯದಲ್ಲಿ ಎಲ್ಲ ಐಪಿ ಸೆಟ್‌ಗಳ ವಿದ್ಯುತ್ ಸಂಪರ್ಕವನ್ನು ಕಡಿತಗೊಳಿಸಬೇಕು. ಸೆಕ್ಷನ್ ಅಧಿಕಾರಿಗಳನ್ನು ಇದಕ್ಕೆ ನೇಮಿಸಲಾಗುವುದೆಂದು ಹೆಸ್ಕಾಂ ಕಾರ್ಯನಿರ್ವಾಹಕ ಅಭಿಯಂತರ ಕಿರಣ ಕುಮಾರ ತಿಳಿಸಿದರು.

## ಗಂಜಿ ಬಸವೇಶ್ವರ ಜಾತ್ರಾ ಮಹೋತ್ಸವ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ



ನಗರದ ಉಸುಗಿನಗಟ್ಟಿ ಓಣಿಯ ಶ್ರೀ ಗಂಜಿ ಬಸವೇಶ್ವರ ದೇವರ 62ನೇ ವರ್ಷದ ಜಾತ್ರಾ ಮಹೋತ್ಸವ ಮೇ. 10ರಂದು ನೆರವೇರಲಿದೆ.

ಅಂದು ಬೆಳಿಗ್ಗೆ 8 ಗಂಟೆಗೆ ಮಹಾರುದ್ರಾಭಿಷೇಕ, ಜಗಜ್ಯೋತಿ ಬಸವೇಶ್ವರ ಹಾಗೂ ಜಗದ್ಗುರು ಏಕೋರಾಮಾರಾಧ್ಯರ ಭಾವಚಿತ್ರಗಳೊಂದಿಗೆ ನೂರಾರು ಜೋಡಿ ಎತ್ತುಗಳ ಭವ್ಯ ಮೆರವಣಿಗೆಯು ಸಕಲ ವಾದ್ಯ ವೈಭವ, ಕುಂಭಾರತಿಯೊಂದಿಗೆ ಶ್ರೀ ಗಂಜಿ ಬಸವೇಶ್ವರ ಮಂಗಲ ಮೂರ್ತಿಯ ಮಹಾ ಅಂದೋಲಿಕೋತ್ಸವವು ಗದಗ ಶಹರದ ಪ್ರಮುಖ ಬೀದಿಗಳಲ್ಲಿ ನಡೆಯಲಿದೆ. ನಂತರ ಸಾಯಂಕಾಲ 6 ಗಂಟೆಗೆ ಗಂಜಿ ಬಸವೇಶ್ವರ ಮಹಾರಥೋತ್ಸವ ಜರುಗುವುದು.

ಎಲ್ಲ ಕಾರ್ಯಕ್ರಮಗಳಲ್ಲಿ ಓಣಿಯ ಸಮಸ್ತ ನಾಗರಿಕರು, ಗುರು-ಹಿರಿಯರು ಪಾಲ್ಗೊಂಡು ಶ್ರೀ ದೇವರ ಕೃಪೆಗೆ ಪಾತ್ರರಾಗಬೇಕೆಂದು ಪ್ರಕಟಣೆಯಲ್ಲಿ ಕೋರಲಾಗಿದೆ.

## ಹೌಸಿಂಗ್ ಬೋರ್ಡ್ ಕಾಲೋನಿಯಲ್ಲಿ ಯುವಕನ ಹತ್ಯೆ



■ವಿಜಯಸಾಕ್ಷಿ ಸುದ್ದಿ, ಡಂಬಳ

ಮುಂಡರಗಿ ಪಟ್ಟಣದ ಹೊರವಲಯದ ಹೌಸಿಂಗ್ ಬೋರ್ಡ್ ಕಾಲೋನಿಯಲ್ಲಿ ಯುವಕನೋರ್ವನ ತಲೆಗೆ ಬಿಯರ್ ಬಾಟಲಿಯಿಂದ ಹೊಡೆದು ಹತ್ಯೆ ಮಾಡಿರುವ ಘಟನೆ ಗುರುವಾರ ವರದಿಯಾಗಿದೆ.

ಹತ್ಯೆಯಾಗಿರುವ ಯುವಕ ಸುಭಾಸ ನಾಯಕ, ಕೊಪ್ಪಳ ಜಿಲ್ಲೆಯ ಹೈದರ ನಗರ ತಾಂಡಾದ ನಿವಾಸಿ ಎನ್ನಲಾಗಿದ್ದು, ಬುಧವಾರ ರಾತ್ರಿ ಮುಂಡರಗಿ ಹೊರವಲಯದ ಹೌಸಿಂಗ್ ಬೋರ್ಡಿನ ಕಾಲೋನಿಯ ಬಯಲಿನಲ್ಲಿ ಇಬ್ಬರು ಗೆಳೆಯರ ಜೊತೆಗೆ ಕೂಡಿಕೊಂಡು ಪಾರ್ಟಿ ಮಾಡಿದ್ದಾನೆ. ಆದರೆ ಅದೇ ಬಯಲಿನಲ್ಲಿ ತಡರಾತ್ರಿ ಯುವಕನನ್ನು ಬಿಯರ್ ಬಾಟಲಿಯಿಂದ ತಲೆಗೆ ಹೊಡೆದು ಹತ್ಯೆ ಮಾಡಿರುವದಾಗಿ ಗುರುವಾರ ಬೆಳಿಗ್ಗೆ ಬೆಳಕಿಗೆ ಬಂದಿದೆ.

ಸುಭಾಸ ನಾಯಕ ಜೊತೆಗೆ ಇದ್ದ ಗೆಳೆಯರು ತಾಂಡಾಕ್ಕೆ ಹೋಗಿ ಹತ್ಯೆಯ ಘಟನೆಯ ಕುರಿತು ಮಾಹಿತಿ ನೀಡಿದ್ದಾರೆ ಎನ್ನಲಾಗಿದ್ದು, ಘಟನಾ ಸ್ಥಳದಲ್ಲಿ ಮುಂಡರಗಿ ಪೊಲೀಸರು ಪರಿಶೀಲನೆ ನಡೆಸಿ, ಘಟನೆಯ ಕುರಿತು ಸಮಗ್ರ ತನಿಖೆ ನಡೆಸುತ್ತಿರುವುದಾಗಿ ವರದಿಯಾಗಿದೆ.

## ಉರ್ದು ಬಾಲಕಿಯರ ಪ್ರೌಢಶಾಲೆಯ ಎಸ್‌ಎಸ್‌ಎಲ್‌ಸಿ ಫಲಿತಾಂಶ




■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಆಂಗ್ಲೋ ಉರ್ದು ಬಾಲಕಿಯರ ಪ್ರೌಢಶಾಲೆಯ ಎಸ್‌ಎಲ್‌ಎಲ್‌ಸಿ ಫಲಿತಾಂಶ ಶೇ. 74.39 ಆಗಿದ್ದು, ಶಾಲೆಗೆ ಪ್ರಥಮ ಸ್ಥಾನ ಸಂಜಿದಾಬಾನು ಎಸ್ ರಾಮದುರ್ಗ (91.36), ದ್ವಿತೀಯ ಸ್ಥಾನ ತಸ್ಮಿಯಾ ಎ. ಮುಲ್ಲಾ (84.76), ಆಯಿಶಾಸಿದ್ದಿಕಾ ಎಸ್.ನವಲಗುಂದ (84.96), ತೃತೀಯ ಸ್ಥಾನ ಸಾನಿಯಾ ಅಗಸಿಮನಿ (83.52) ಪಡೆದು ಶಾಲೆಗೆ ಕೀರ್ತಿ ತಂದಿದ್ದಾರೆ.

ತೇರ್ಗಡೆ ಹೊಂದಿದ ಎಲ್ಲಾ ವಿದ್ಯಾರ್ಥಿನಿಯರ ಸಾಧನೆಯನ್ನು ಶಿಕ್ಷಣ ಸಂಸ್ಥೆಯ ಚೇರಮನ್ ಹಾಜಿ ಜನಾಬ ಸರ್ಫರಾಜಅಹ್ಮದ ಎಸ್. ಉಮಚಗಿ, ಉಪಾಧ್ಯಕ್ಷ ಹಾಜಿ ಎ.ಎಂ. ಕಾಗದಗಾರ, ಕಾರ್ಯದರ್ಶಿ ಜನಾಬ ಎಂ.ಎಂ. ಶೇಖ, ಸದಸ್ಯರಾದ ಹಾಜಿ ರಾಜೇಸಾಬ ಬಾಗಲಕೋಟ, ಜನಾಬ ಶಹನವಾಜ ಎಸ್.ಉಮಚಗಿ, ಪ್ರೊ. ಎ.ಎ. ಮುಲ್ಲಾ, ಜನಾಬ ಜಿಲಾನಿ ಉಮಚಗಿ, ಜನಾಬ ಕೆ.ಎಂ. ಶೇಖ, ಹಾಜಿ ಮೊಹಮ್ಮದ ಇಕ್ಬಾಲ್ ಹಣಗಿ, ಜನಾಬ ಸಯ್ಯದ ಇಸ್ಮಾಯಿಲ ಬಿಜಾಪೂರ, ಜನಾಬ ಮೊಹ್ಮದ ಯೂಸೂಫ ನರಗುಂದ, ಮುಖ್ಯೋಪಾಧ್ಯಾಯ ಎಲ್.ಆರ್. ಇಟಗಿ ಹಾಗೂ ಎಲ್ಲ ಶಿಕ್ಷಕ, ಶಿಕ್ಷಿಕಿಯರು, ಸಿಬ್ಬಂದಿ ವರ್ಗದವರು ಅಭಿನಂದಿಸಿದ್ದಾರೆ.

## ಮೊರಾರ್ಜಿ ಶಾಲೆಗೆ ಉತ್ತಮ ಫಲಿತಾಂಶ



■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣದ ಮೊರಾರ್ಜಿ ದೇಸಾಯಿ ವಸತಿ ಶಾಲೆಯ 2023/24ನೇ ಸಾಲಿನ ಎಸ್‌ಎಸ್‌ಎಲ್‌ಸಿ ಶಾಲಾ ಫಲಿತಾಂಶ ಶೇ.98 ಆಗಿದ್ದು, ನಂದಿತಾ ಪೂಜಾರ (94.80) ಪ್ರಥಮ ಸ್ಥಾನ, ನಂದಿತಾ ಲಮಾಣಿ (94.08) ದ್ವಿತೀಯ ಸ್ಥಾನ, ಬಸಮ್ಮಾ ಪರಿಮಳದ (90.08) ತೃತೀಯ ಸ್ಥಾನ ಪಡೆದು ಶಾಲೆಗೆ ಕೀರ್ತಿ ತಂದಿದ್ದಾರೆ.

ಇವರಿಗೆ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರು ಹಾಗೂ ಪ್ರಾಚಾರ್ಯ ಎಚ್.ಆರ್. ಸಕ್ರಿ ಅಭಿನಂದನೆ ತಿಳಿಸಿದ್ದಾರೆ.

## ಎಸ್‌ಎಸ್‌ಎಲ್‌ಸಿಯಲ್ಲಿ ದಾಖಲೆ ಬರೆದ ಕೆ.ಜಿ. ಮುದಗಲ್ಲ ಪ್ರೌಢಶಾಲೆ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಸಮೀಪದ ಶಿಗ್ಲಿಯ ಕೆ.ಜಿ. ಮುದಗಲ್ಲ ಪ್ರೌಢಶಾಲೆಯ ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆಯಲ್ಲಿ ಪರೀಕ್ಷೆಗೆ ಕುಳಿತ 43 ಮಕ್ಕಳಲ್ಲಿ 12 ಮಕ್ಕಳು ಉನ್ನತ ದರ್ಜೆಯಲ್ಲಿ ಪಾಸಾದರೆ, 31 ಮಕ್ಕಳು ಪ್ರಥಮ ಶ್ರೇಣಿಯಲ್ಲಿ ಪಾಸಾಗುವ ಮೂಲಕ ಸತತ 31ನೇ ವರ್ಷವೂ ನೂರಕ್ಕೆ ನೂರರಷ್ಟು ಫಲಿತಾಂಶ ದಾಖಲಿಸಿದ್ದಾರೆ.

ತಸ್ಲೀಮಾ ಪಟ್ಟಣದ–87.44, ಸಮರ್ಥ ದೇವಾಂಗಮಠ–86.4, ಶ್ವೇತಾ ಮುಳಗುಂದ–85.28, ಹರೀಶ ಹಗ್ಗರದ–85.12, ಸಂಜನಾ ಬಾವಿಕಟ್ಟಿ–83.80, ಅನಿತಾ ಕೆರಿ–83.20, ವಿಕಾಸ ಮರಾಠೆ–82.24, ಶ್ರೀನಿವಾಸ ಹುಲಗೂರ–82.08,



ಸಂಜನಾ ಬಂಕಾಪೂರ–81.06, ಶಿವಕ್ಕ ಮಠಪತಿ–81.02, ರಮೇಶ ಬಂಕಾಪೂರ–80.08, ನಿಖಿಲ್ ಯಳವತ್ತಿ–80.04, ಸಾತ್ವಿಕ್ ಹುಲಗೂರ–80.06, ಸಂಜನಾ ಹುಲಿ–79.38, ಐಶ್ವರ್ಯ ನವಲೆ–78.72 ಪ್ರತಿಶತ ಅಂಕಗಳನ್ನು ಪಡೆದಿದ್ದಾರೆ.

ಗ್ರಾಮೀಣ ಪ್ರದೇಶದ ಮಕ್ಕಳ ಸಾಧನೆಗೆ ಶಾಲೆಯ ಶಿಕ್ಷಕರು, ಸಿಬ್ಬಂದಿಗಳ ಪರಿಶ್ರಮದಿಂದ ಈ ಇತಿಹಾಸ ನಿರ್ಮಿಸಲು ಸಾಧ್ಯವಾಗಿದ್ದು, ರಾಜ್ಯದಲ್ಲಿಯೇ ಉತ್ತಮ ಪ್ರೌಢಶಾಲೆ ಎಂಬ ಹೆಗ್ಗಳಿಕೆಗೆ ಪಾತ್ರವಾಗಿರುವುದು ಗದಗ ಜಿಲ್ಲೆಗೆ ಹೆಮ್ಮೆಯ ಸಂಗತಿ.

ಸಾಧನೆಗೈದ ವಿದ್ಯಾರ್ಥಿಗಳಿಗೆ ಶಾಲಾ ಆಡಳಿತ ಮಂಡಳಿಯ ಚೇರಮನ್ ಬಾಬುಸಾಬ ಪಟ್ಟಣದ, ಆಡಳಿತಾಧಿಕಾರಿಗಳಾದ ರಂಜನ್ ಪಾಟೀಲ, ಸಿ.ಆರ್. ಗೋಕಾವಿ, ರಾಜರತ್ನ ಹುಲಗೂರ, ಚಾಮರಾಜ ಹುಲಗೂರ, ಸಂಸ್ಥೆಯ ಕಾರ್ಯದರ್ಶಿ ಹಾಗೂ ಶಾಲಾ ಮುಖ್ಯೋಪಾಧ್ಯಾಯ ಎಲ್.ಎಸ್. ಅರಳಹಳ್ಳಿ ಶುಭ ಕೋರಿದ್ದಾರೆ.

## ನಿಶಾದ ಘೂಡುನಾಯ್ಕರ ತಾಲೂಕಿಗೆ ಪ್ರಥಮ

■ವಿಜಯಸಾಕ್ಷಿ ಸುದ್ದಿ, ನವಲಗುಂದ

2024ರ ಮಾರ್ಚ್–ಎಪ್ರಿಲ್‌ನಲ್ಲಿ ನಡೆದ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಅಣ್ಣಿಗೇರಿಯ ನಿಂಗಮ್ಮ ಎಸ್.ಹೂಗಾರ ಆಂಗ್ಲ ಮಾಧ್ಯಮ ಶಾಲೆಯ ವಿದ್ಯಾರ್ಥಿನಿ ನಿಶಾದ ಹಸನ್‌ಸಾಬ ಘೂಡುನಾಯ್ಕರ 625 ಕ್ಕೆ 609 (ಶೇ.97.44) ಅಂಕಗಳನ್ನು ಪಡೆಯುವ ಮೂಲಕ ವಿಭಜನಾಪೂರ್ವ ನವಲಗುಂದ ತಾಲೂಕಿಗೆ ಪ್ರಥಮ ಸ್ಥಾನ ಪಡೆದು ಅಭಿನಂದನೆಗೆ ಪಾತ್ರಳಾಗಿದ್ದಾಳೆ.

ವಿದ್ಯಾರ್ಥಿನಿಯ ಈ ಸಾಧನೆಗೆ ನವಲಗುಂದ ಕ್ಷೇತ್ರ ಶಿಕ್ಷಣಾಧಿಕಾರಿ ಹಾಗೂ



ಜಗದ್ಗುರು ತೋಂಟದಾರ್ಯ ವಿದ್ಯಾಪೀಠದ ಶ್ರೀಮತಿ ನಿಂಗಮ್ಮ ಎಸ್.ಹೂಗಾರ ಸಮೂಹ ವಿದ್ಯಾಲಯಗಳ ಪ್ರಾಚಾರ್ಯರು, ಶಾಲೆಯ ಮುಖ್ಯೋಪಾಧ್ಯಾಯರು ಮತ್ತು ಶಿಕ್ಷಕ ಬಳಗದವರು ಅಭಿನಂದನೆಗಳನ್ನು ಸಲ್ಲಿಸಿದ್ದಾರೆ. ನಿಶಾದ್ ಅಣ್ಣಿಗೇರಿ ಮಾಜಿ ಉಪಾಧ್ಯಕ್ಷ, ಕಾಂಗ್ರೆಸ್ ಮುಖಂಡ ಹಸನ್ ಸಾಬ ಘೂಡುನಾಯ್ಕರ ಅವರ ಪುತ್ರಿಯಾಗಿದ್ದಾಳೆ.

## ಮುಕ್ತ, ನ್ಯಾಯಸಮ್ಮತ ಚುನಾವಣೆ ನಡೆದರೆ ಬಿಜೆಪಿಗೆ ಅಧಿಕಾರ ಉಳಿಸಿಕೊಳ್ಳುವುದು ಕಷ್ಟ: ಮಾಯಾವತಿ

■ವಿಜಯಸಾಕ್ಷಿ ಸುದ್ದಿ, ಉತ್ತರ ಪ್ರದೇಶ



"ಪೊಳ್ಳು ಭರವಸೆಗಳ ಮೂಲಕ ಜನರು ನೋಡುತ್ತಾರೆ, ಲೋಕಸಭೆ ಚುನಾವಣೆಯನ್ನು ಮುಕ್ತ ಮತ್ತು ನ್ಯಾಯಯುತ ರೀತಿಯಲ್ಲಿ ನಡೆದರೆ ಕೇಂದ್ರದಲ್ಲಿ ಆಡಳಿತ ಪಕ್ಷವು ಅಧಿಕಾರವನ್ನು ಉಳಿಸಿಕೊಳ್ಳುವುದು ಕಷ್ಟ" ಎಂದು ಬಿಎಸ್‌ಪಿ ಅಧ್ಯಕ್ಷೆ ಮಾಯಾವತಿ ಹೇಳಿದ್ದಾರೆ.

"ಕಾಂಗ್ರೆಸ್‌ನಂತೆ ಬಿಜೆಪಿ ಕೂಡ ಎಲ್ಲಾ ಫೆಡರಲ್ ತನಿಖಾ ಸಂಸ್ಥೆಗಳನ್ನು ರಾಜಕೀಯಗೊಳಿಸಿದೆ ಎಂದು ಈಗ ತೋರುತ್ತಿದೆ" ಎಂದು ಅವರು ಹೇಳಿದರು.

ಚುನಾವಣಾ ರ್‍ಯಾಲಿಯನ್ನುದ್ದೇಶಿಸಿ ಮಾತನಾಡಿದ ಮಾಯಾವತಿ, "ಈ ಬಾರಿ ಬಿಜೆಪಿಯ ರಂಗಭೂಮಿ ಮತ್ತು ವಾಕ್ಚಾತುರ್ಯವು ಕೆಲಸ ಮಾಡುತ್ತಿಲ್ಲ. ಏಕೆಂದರೆ, ಅವರು ನೀಡಿದ ಭರವಸೆಗಳಲ್ಲಿ ನಾಲ್ಕನೇ ಒಂದು ಭಾಗವನ್ನೂ ಈಡೇರಿಸಿಲ್ಲ ಎಂದು ಜನರು ಸಾಕಷ್ಟು ಅರ್ಥಮಾಡಿಕೊಂಡಿದ್ದಾರೆ; ಬಿಜೆಪಿಯ ಪೊಳ್ಳು ಭರವಸೆಗಳನ್ನು ಜನರು ಗಮನಿಸುತ್ತಿದ್ದಾರೆ" ಎಂದು ಅವರು ಹೇಳಿದ್ದಾರೆ.

## ಅನ್ನದಾನೀಶ್ವರ ಶ್ರೀಗಳಿಗೆ 'ಸುವರ್ಣಗಿರಿ ಪ್ರಶಸ್ತಿ' ಪ್ರದಾನ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ



ಕೊಪ್ಪಳ ಜಿಲ್ಲೆಯ ಕನಕಗಿರಿಯ ಸುವರ್ಣಗಿರಿ ಸಂಸ್ಥಾನ ವಿರಕ್ತಮಠದಲ್ಲಿ ವಿಶ್ವಗುರು ಬಸವೇಶ್ವರರ 891ನೇ ಜಯಂತ್ಯುತ್ಸವದ ನಿಮಿತ್ತ 'ಸುವರ್ಣಗಿರಿ ವೈಭವ' ಕಾರ್ಯಕ್ರಮ ಮೇ 10ರಂದು ನಡೆಯಲಿದೆ.

ಸಂಜೆ 5ಕ್ಕೆ ಜರುಗುವ ಸುವರ್ಣಗಿರಿ ಪ್ರಶಸ್ತಿ ಸಮರ್ಪಣೆ ಕಾರ್ಯಕ್ರಮದಲ್ಲಿ ಮುಂಡರಗಿ ಅನ್ನದಾನೀಶ್ವರ ಸಂಸ್ಥಾನ ಮಠದ ಜಗದ್ಗುರು ನಾಡೋಜ ಡಾ. ಅನ್ನದಾನೀಶ್ವರ ಸ್ವಾಮೀಜಿ ಅವರಿಗೆ 'ಸುವರ್ಣಗಿರಿ ಪ್ರಶಸ್ತಿ' ಪ್ರದಾನ ನಡೆಯಲಿದೆ. ಜಾಲಹಳ್ಳಿ ಬೃಹನ್ಮಠದ ಜಯಶಾಂತಲಿಂಗೇಶ್ವರ ಸ್ವಾಮೀಜಿ ಸಾನ್ನಿಧ್ಯ ವಹಿಸುವರು. ಮಾಹಲಿಂಗ ಸ್ವಾಮೀಜಿ, ಡಾ. ರುದ್ರಮುನಿ ಶಿವಾಚಾರ್ಯ ಸ್ವಾಮೀಜಿ ಅಧ್ಯಕ್ಷತೆ ವಹಿಸುವರು ಎಂದು ಶ್ರೀಮಠದ ಪ್ರಕಟಣೆ ತಿಳಿಸಿದೆ.

## ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇ.93ರಷ್ಟು ಅಂಕ ಗಳಿಸಿ ಸಾಧನೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ



ತಾಲೂಕಿನ ಶಿಗ್ಲಿ ಗ್ರಾಮದ ನವಚೇತನ ವಿದ್ಯಾನಿಕೇತನ ಸಂಸ್ಥೆಯ ಎನ್.ಆರ್. ಗಂಗಾವತಿ ಆಂಗ್ಲ ಮಾಧ್ಯಮ ಪ್ರೌಢಶಾಲೆಯ ವಿದ್ಯಾರ್ಥಿ ಅರುಣ ಹುಲಗೂರ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇ.93ರಷ್ಟು ಅಂಕ ಗಳಿಸಿ ಸಾಧನೆಗೈದಿದ್ದಾನೆ.

## ಉಚಿತ ಆರೋಗ್ಯ ಸಲಹಾ ಶಿಬಿರ ನಾಳೆ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಹಳೇ ಡಿಸಿ ಕಛೇರಿ ಹತ್ತಿರದ ರೈತ ಭವನದಲ್ಲಿರುವ ಕೆಎಸ್‌ಆರ್‌ಡಿಪಿಆರ್ ಯುನಿವರ್ಸಿಟಿಯಲ್ಲಿ ಮೇ.11ರಂದು ಬೆಳಿಗ್ಗೆ 10ರಿಂದ ಸಾಯಂಕಾಲ 4ರವರೆಗೆ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತರಾಜ್ ವಿಶ್ವವಿದ್ಯಾಲಯ, ವಿಶ್ವವಿದ್ಯಾಲಯದ ರೆಡ್ ಕ್ರಾಸ್ ಕೋಶ, ಆಯುಷ್ ಇಲಾಖೆ ಮತ್ತು ವೈದ್ಯಕೀಯ ವಿಜ್ಞಾನ ಮಹಾವಿದ್ಯಾಲಯ ಹಾಗೂ ಗೋ-ಜೈವಿಕ ಕೃಷಿ ಅನುಸಂಧಾನ ಕೇಂದ್ರ ಟ್ರಸ್ಟ್ ಸಹಯೋಗದಲ್ಲಿ ಪಂಚಗವ್ಯ ಆಧಾರಿತ ಉಚಿತ ಆರೋಗ್ಯ ಸಲಹಾ ಶಿಬಿರ ಹಮ್ಮಿಕೊಳ್ಳಲಾಗಿದೆ.

ಪಂಚಗವ್ಯ ಆಧಾರಿತ ಚಿಕಿತ್ಸೆಯಲ್ಲಿ ಪರಿಣಿತ ಹಾಗೂ 25 ವರ್ಷಕ್ಕಿಂತ ಹೆಚ್ಚು ಅನುಭವ ಹೊಂದಿದ ಬೆಂಗಳೂರಿನ ತಜ್ಞ ವೈದ್ಯರಾದ ಡಾ. ಡಿ.ಪಿ. ರಮೇಶ್ ಮಾರ್ಗದರ್ಶನ ಮತ್ತು ವಿಶ್ವವಿದ್ಯಾಲಯದ ವೈದ್ಯಾಧಿಕಾರಿಗಳಾದ ಡಾ. ಗೊಳಪ್ಪ ಡಿ. ನೇತೃತ್ವದಲ್ಲಿ ವಿವಿಧ ಆರೋಗ್ಯ ಸಮಸ್ಯೆಗಳಿಗೆ ಉಚಿತ ಸಮಾಲೋಚನೆ ಹಾಗೂ ತಪಾಸಣೆ ಪ್ರತಿ ತಿಂಗಳು 2ನೇ ಶನಿವಾರ ನೀಡಲಾಗುವುದು ಎಂದು ಪದಾಧಿಕಾರಿಗಳು ತಿಳಿಸಿದ್ದಾರೆ.

## ಬಸವ ಜಯಂತಿ ಮೆರವಣಿಗೆ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ



ಕರ್ನಾಟಕದ ಸಾಂಸ್ಕೃತಿಕ ನಾಯಕ, ವಿಶ್ವಗುರು, ಲಿಂಗಾಯತ ಧರ್ಮ ಸಂಸ್ಥಾಪಕ ಬಸವಣ್ಣನವರ 919ನೇ ಜಯಂತಿ ಅಂಗವಾಗಿ ಮೇ. 10ರಂದು ಮುಂಜಾನೆ 9 ಗಂಟೆಗೆ ಪೂಜ್ಯ ಜಗದ್ಗುರು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳವರು ಮೆರವಣಿಗೆಗೆ ಚಾಲನೆ ನೀಡಲಿದ್ದಾರೆ.

ಮೆರವಣಿಗೆಯು ಶ್ರೀಮಠದಿಂದ ಪ್ರಾರಂಭವಾಗಿ ಮಹೇಂದ್ರಕರ ವೃತ್ತ, ಹುಯಿಲಗೋಳ ವೃತ್ತ, ಬಸವೇಶ್ವರ ವೃತ್ತ, ಕೆ.ಎಚ್. ಪಾಟೀಲ ವೃತ್ತ, ಮಾಳಶೆಟ್ಟಿ ವೃತ್ತ, ರೋಟರಿ ವೃತ್ತ, ಮಹಾತ್ಮಾ ಗಾಂಧಿ ವೃತ್ತದ ಮೂಲಕ ತೋಂಟ-ದಾರ್ಯ ಮಠಕ್ಕೆ ತಲುಪುವುದು.

ಮೆರವಣಿಗೆಯಲ್ಲಿ ಬಸವದಳ-ಬಸವಕೇಂದ್ರ-ಲಿಂಗಾಯತ ಪ್ರಗತಿಶೀಲ ಸಂಘ, ಶ್ರೀ ಜಗದ್ಗುರು ತೋಂಟದಾರ್ಯ ಮಠದ ಜಾತ್ರಾ ಸಮಿತಿ-2024, ಕನ್ನಡ ಸಾಹಿತ್ಯ ಪರಿಷತ್ತು, ಶರಣ ಸಾಹಿತ್ಯ ಪರಿಷತ್ತು, ಕದಳಿ ಮಹಿಳಾ ವೇದಿಕೆ, ಬಸವ ಯೋಗ ಕೇಂದ್ರ, ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರ, ಜಾಗತಿಕ ಲಿಂಗಾಯತ ಮಹಾಸಭೆ, ಶರಣರಾದ ಜೇಡರ ದಾಸಿಮಯ್ಯ, ಮಾದಾರ ಚನ್ನಯ್ಯ, ಡೋಹರ ಕಕ್ಕಯ್ಯ, ನೂಲಿಯ ಚಂದಯ್ಯ, ಸಮಗಾರ ಹರಳಯ್ಯ, ಮಡಿವಾಳ ಮಾಚಯ್ಯ, ಅಂಬಿಗರ ಚೌಡಯ್ಯ, ಮೇದಾರ ಕೇತಯ್ಯ, ಹೂಗಾರ ಮಾದಯ್ಯ, ಶಿವಯೋಗಿ ಸಿದ್ಧರಾಮೇಶ್ವರ, ಹಡಪದ ಅಪ್ಪಣ್ಣ, ಕುಂಬಾರ ಗುಂಡಯ್ಯ, ಕುರುಬ ಗೊಲ್ಲಾಳೇಶ, ದಲಿತ ಸಂಘರ್ಷ ಸಮಿತಿ ಹಾಗೂ ಬಸವಪರ ಸಂಘಟನೆಗಳ ಮುಖಂಡರು ಭಾಗವಹಿಸಬೇಕೆಂದು ಸಂಘಟಿಕರ ಪರವಾಗಿ ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಶೇಖಣ್ಣ ಕಳಸಾಪೂರಶೆಟ್ರ, ಶ್ರೀ ಜಗದ್ಗುರು ತೋಂಟ-ದಾರ್ಯ ಮಠದ ಜಾತ್ರಾ ಸಮಿತಿ-2024 ಅಧ್ಯಕ್ಷ ಪ್ರಾ. ಕೆ.ಎಚ್. ಬೇಲೂರ ಹಾಗೂ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

## ಬಣಜಿಗ ಸಂಘದಿಂದ ಬಸವ ಜಯಂತಿ ಇಂದು

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ನರೇಗಲ್ಲ-ಕೋಡಿಕೊಪ್ಪ ಬಣಜಿಗ ಸಮಾಜದ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಮೇ 10ರಂದು ಸಂಜೆ 5ಕ್ಕೆ ಬಸವ ಜಯಂತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಸಂಘದ ಕಾರ್ಯದರ್ಶಿ ಶಿವಯೋಗಿ ಜಕ್ಕಲಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಸವ ಜಯಂತಿ ಕಾರ್ಯಕ್ರಮವು ಗದಗ ರಸ್ತೆಯಲ್ಲಿರುವ ಪೊಲೀಸ್ ಠಾಣೆಯ ಹತ್ತಿರದ ಬಸವರಾಜ ಜಕ್ಕಲಿಯವರ ಮನೆಯಲ್ಲಿ ನಡೆಯಲಿದ್ದು, ನರೇಗಲ್ಲ ಬಣಜಿಗ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಗುರುಪಾದಪ್ಪ ಬೆಲ್ಲದ ಅಧ್ಯಕ್ಷತೆ ವಹಿಸಲಿದ್ದಾರೆ. ನಿವೃತ್ತ ಪ್ರಾಧ್ಯಾಪಕ ಡಾ. ಎ.ಕೆ. ನಾಶಿ, ಎಸ್.ಎ. ಪಿ.ಯು ಕಾಲೇಜಿನ ಕನ್ನಡ ಉಪನ್ಯಾಸಕ ಎಫ್.ಎನ್. ಹುಡೇದ ಮತ್ತು ಸಮಾಜದ ಹಿರಿಯರಾದ ಸಿ.ವಿ. ವಂಕಲಕುಂಟಿಯವರು ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

### ಶಾಂತಿಯುತ ಚುನಾವಣೆಗೆ ಸಹಕರಿಸಿದ ನಾಗರಿಕರಿಗೆ, ಅಧಿಕಾರಿಗಳಿಗೆ ಕೃತಜ್ಞತೆ ಸಲ್ಲಿಸಿದ ಸಚಿವ ಎಚ್.ಕೆ. ಪಾಟೀಲ

# ಗೊಂದಲಗಳಿಲ್ಲದೇ ಪೂರ್ಣಗೊಂಡ ಮತದಾನ

■ವಿಜಯಸಾಕ್ಷಿ ಸುದ್ದಿ, ಗದಗ

ಹಾವೇರಿ-ಗದಗ ಲೋಕಸಭಾ ಕ್ಷೇತ್ರದಲ್ಲಿ ಚುನಾವಣೆ ಶಾಂತಿಯುತವಾಗಿ ಪೂರ್ಣಗೊಂಡಿದ್ದು, ಬಹುದೊಡ್ಡ ಸಂಖ್ಯೆಯಲ್ಲಿ ಮತದಾರರು ಶಾಂತಿ-ಶಿಸ್ತು ಕಾಪಾಡಿಕೊಂಡು ಮತದಾನ ಮಾಡಿದ್ದಾರೆ. ಯಾವುದೇ ಗೊಂದಲ, ಗಲಾಟೆ ಪ್ರಕರಣ ದಾಖಲಾಗದೇ ಶಾಂತಿಯುತ ಮತದಾನ ನಡೆದಿದ್ದಕ್ಕೆ ಜನತೆಗೆ ಹಾಗೂ ಈ ಬಗ್ಗೆ ಜಾಗೃತಿ ಮೂಡಿಸಿದ ಅಧಿಕಾರಿಗಳಿಗೂ ಕೃತಜ್ಞತೆ ಸಲ್ಲಿಸುತ್ತೇನೆ ಎಂದು ರಾಜ್ಯದ ಕಾನೂನು ಹಾಗೂ ಸಂಸದೀಯ ವ್ಯಹಾರಗಳ ಇಲಾಖೆ, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.





ನಗರದ ಪತ್ರಿಕಾ ಭವನದಲ್ಲಿ ಗುರುವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಹಿಳಾ ಮತದಾರರು ಕಳೆದ ಬಾರಿಗಿಂತಲೂ ಈ ಬಾರಿ ಶೇ.4ಕ್ಕಿಂತಲೂ ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಮತದಾನ ಮಾಡಿದ್ದಾರೆ. ಪುರುಷ ಮತದಾರರು ಕೂಡ ಕಳೆದ ಬಾರಿಗಿಂತ ಶೇ.2ರಷ್ಟು ಹೆಚ್ಚಿನ ಸಂಖ್ಯೆಯಲ್ಲಿ ಮತಚಲಾವಣೆ ಮಾಡಿದ್ದು, ಒಟ್ಟಾರೆ ಮತ ಪ್ರಮಾಣವೂ ಏರಿಕೆಯಾಗಿದೆ. ಮತದಾನದ ಪ್ರಮಾಣ ಹೆಚ್ಚಳವಾಗಿದ್ದು ಮತದಾರರು ಜಾಗೃತರಾಗಿದ್ದಾರೆ ಎಂದರು.

ಈ ಚುನಾವಣೆ ಬದುಕು-ಭಾವನೆಗಳ ಮಧ್ಯೆ, ಬಡವ-ಶ್ರೀಮಂತರ ನಡುವೆ ನಡೆದ ಚುನಾವಣೆಯಾಗಿದ್ದು, ಈ ಚುನಾವಣೆ ಗ್ಯಾರಂಟಿ ಯೋಜನೆಗೆ 'ಜನಾಭಿಪ್ರಾಯ ಸಂಗ್ರಹ' ಇದ್ದಂತೆ ಭಾಸವಾಗಿತ್ತು. ಈ ಚುನಾವಣೆಯಲ್ಲಿ ಮಾಧ್ಯಮದವರು ಕೂಡ ಉತ್ತಮವಾಗಿ ಸಹಕರಿಸಿದ್ದಾರೆ. ಸುದ್ದಿಗಳನ್ನು ಪ್ರಚುರ ಪಡಿಸಿದ್ದಕ್ಕೆ ವಿಶೇಷ ಧನ್ಯವಾದ ಸಲ್ಲಿಸುತ್ತೇನೆ ಎಂದರು.

ಚುನಾವಣೆ ಮುಗಿದ ಮರುದಿನ ನಾವು ವಾರ್ಡ್‌ವಾರು ಸಭೆ ಮಾಡಿದ್ದು, ಗದಗ-ಬೆಟಗೇರಿ ಅವಳಿ ನಗರದಲ್ಲಿ ಕಾಂಗ್ರೆಸ್ ಹೆಚ್ಚು ಮತ ಪಡೆಯಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದ ಸಚಿವರು, ರೋಣ, ಶಿರಹಟ್ಟಿ ವಿಧಾನಸಭಾ ಕ್ಷೇತ್ರದಲ್ಲಿಯೂ ಮುನ್ನಡೆ ಸಾಧಿಸುವ ವಿಶ್ವಾಸವಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಗದಗ ಜಿ.ಪಂ ಮಾಜಿ ಅಧ್ಯಕ್ಷ ವಾಸಣ್ಣ ಕುರಡಗಿ, ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಗುರಣ್ಣ ಬಳಗಾನೂರ, ನಗರಸಭೆ ಮಾಜಿ ಅಧ್ಯಕ್ಷ ಬಿ.ಬಿ. ಅಸೂಟಿ, ಗದಗ ತಾಲೂಕು ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಹಾಗೂ ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಅಶೋಕ ಮಂದಾಲಿ, ಪಕ್ಷದ ಜಿಲ್ಲಾ ವಕ್ತಾರ ಬಸವರಾಜ ಕಡೇಮನಿ, ಎಸ್.ಎನ್. ಬಳ್ಳಾರಿ, ಉಮರಫಾರೂಖ್ ಹುಬ್ಬಳ್ಳಿ, ನಗರಸಭೆ ಸದಸ್ಯ ಇಮ್ತಿಯಾಜ್ ಶಿರಹಟ್ಟಿ ಸೇರಿ ಹಲವರಿದ್ದರು.

ಯಶ್ ಅವರ ಕಟೌಟ್ ಕಟ್ಟುವ ವೇಳೆ ನಡೆದ ಘಟನೆಯಿಂದ ಆತ್ಮೀಯ ಗೆಳೆಯರ ಸಾವು ನಮ್ಮಲ್ಲಿ ನೋವನ್ನುಂಟು ಮಾಡಿದೆ. ಯಶ್ ಬಗ್ಗೆ ಅವರಿಗೆ ಅಪಾರವಾದ ಪ್ರೀತಿಯಿತ್ತು. ನಟ ಯಶ್ ಅವರು ಮೃತ ಗೆಳೆಯರ ಮನೆಗೆ ಭೇಟಿ ನೀಡಿ ಸಾಂತ್ವನ ಹೇಳಬೇಕು. ನವೀನ ಮತ್ತು ಮುರಳಿ ಪ್ರಾಣ ಸ್ನೇಹಿತರಾಗಿದ್ದರು. ಜೀವನುದ್ದಕ್ಕೂ ಒಂದಾಗಿದ್ದ ಅವರು ಸಾವಿನಲ್ಲೂ ಒಂದಾದರು. ಗೆಳೆಯರ ಕುಟುಂಬಕ್ಕೆ ಭಗವಂತ ನೋವು ಸಹಿಸುವ ಶಕ್ತಿ ಕೊಡಲಿ.

– ಪ್ರಕಾಶ ಮ್ಯಾಗೇರಿ.
ಗಾಯಾಳು ಯುವಕ.

### ಜನಪ್ರತಿನಿಗಳ ವಿಶೇಷ ನ್ಯಾಯಾಲಯ ತಾತ್ಕಾಲಿಕ ಸ್ಥಳಾಂತರ: ಸಚಿವ ಎಚ್.ಕೆ. ಪಾಟೀಲ

# ಗೌಪ್ಯತೆ ಕಾಪಾಡುವುದು ಸರಕಾರದ ಕರ್ತವ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ಸಂಸದ ಪ್ರಜ್ವಲ್ ರೇವಣ್ಣ ಪೆನ್‌ಡ್ರೈವ್ ಪ್ರಕರಣದ ವಿಚಾರಣೆ ನಡೆಸುತ್ತಿರುವ ಎಸ್‌ಐಟಿ ತನಿಖಾಕಾಧಿರಿಗಳ ವಿನಂತಿಯ ಮೇರೆಗೆ ದೂರುದಾರರು, ಸಾಕ್ಷಿದಾರರ ಗೌಪ್ಯತೆ ಕಾಪಾಡುವುದು ಮತ್ತು ರಕ್ಷಣೆ ನೀಡುವ ಉದ್ದೇಶದಿಂದ ಜನಪ್ರತಿನಿಗಳ ವಿಶೇಷ ನ್ಯಾಯಾಲಯವನ್ನು ವಿಚಾರಣೆ ಸಂದರ್ಭದಲ್ಲಿ ಮಾತ್ರ ಗುರುನಾನಕ ಭವನಕ್ಕೆ ತಾತ್ಕಾಲಿಕವಾಗಿ ಸ್ಥಳಾಂತರಿಸಲು ಅನುಮೋದಿಸಲಾಗಿದೆ ಎಂದು ಕಾನೂನು ಹಾಗೂ ಪ್ರವಾಸೋದ್ಯಮ ಸಚಿವ ಎಚ್.ಕೆ. ಪಾಟೀಲ ಹೇಳಿದರು.



ಗುರುವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೋವಿಡ್ ಸಂದರ್ಭದಲ್ಲಿ ಬೇಲ್ ಪ್ರಕರಣ ವಿಚಾರಣೆಗೆ ಗುರುನಾನಕ ಭವನದಲ್ಲಿ ನ್ಯಾಯಾಲಯ ಸ್ಥಾಪಿಸಲಾಗಿತ್ತು. ಅದೇ ಜಾಗದಲ್ಲಿ ಈ ಪ್ರಕರಣದ ವಿಚಾರಣೆ ನಡೆಯಲಿದೆ. ಈ ಸಂಬಂಧ ಹೈಕೋರ್ಟ್‌ಗೂ ಪತ್ರ ಬರೆದು ವಿನಂತಿಸಲಾಗಿದೆ ಎಂದು ತಿಳಿಸಿದರು.

ಸಂಸದ ಪ್ರಜ್ವಲ್ ಪ್ರಕರಣದ ವಿಚಾರಣೆ ನಡೆಯುತ್ತಿರುವ ನ್ಯಾಯಾಲಯದಲ್ಲಿ ಸ್ಥಳಾವಕಾಶದ ಕೊರತೆಯಿದೆ. ಪ್ರಕರಣದಲ್ಲಿ ನೊಂದ ಮಹಿಳೆಯರು, ಸಾಕ್ಷಿದಾರರಿಗೆ ಬೆದರಿಕೆ, ಆಮಿಷ ಒಡ್ಡುತ್ತಿರುವುದು ಕಂಡುಬಂದಿದೆ. ಕೆಲ ಸಂತ್ರಸ್ತೆಯರು ಅಪಹರಣಕ್ಕೂ ಒಳಗಾಗಿದ್ದಾರೆ. ಈ ಬಗ್ಗೆ ಪ್ರಕರಣ ದಾಖಲಿಸಿ ತನಿಖೆ ಕೈಗೊಳ್ಳಲಾಗುತ್ತಿದೆ. ಹೀಗಿದ್ದರೂ, ದೂರುದಾರರು, ಸಾಕ್ಷಿದಾರರ ಗೌಪ್ಯತೆ ಕಾಪಾಡುವುದು ಸರಕಾರ ಮತ್ತು ತನಿಖಾ ತಂಡದ ಜವಾಬ್ದಾರಿಯಾಗಿದೆ. ಆ ಹಿನ್ನೆಲೆಯಲ್ಲಿ ನ್ಯಾಯಾಲಯವನ್ನು ವಿಚಾರಣೆ ದಿನದಂದು ಮಾತ್ರ ತಾತ್ಕಾಲಿಕವಾಗಿ ಸ್ಥಳಾಂತರಿಸಲು ಒಪ್ಪಿಗೆ ನೀಡಲಾಗಿದೆ ಎಂದರು.

ಅಂಬಾನಿ, ಅದಾನಿ ಕಾಂಗ್ರೆಸ್ಸಿಗೆ ಹಣ ಕೊಟ್ಟಿದ್ದಾರೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಹಣ ಕೊಟ್ಟಿದ್ದು ನಿಜವಾದರೆ ಪ್ರಧಾನಿ ಮೌನವಾಗಿರುವುದೇಕೆ? ತಕ್ಷಣ ತಪ್ಪಿತಸ್ಥರನ್ನು ಬಂಧಿಸಿ ಜೈಲಿಗೆ ಹಾಕಿ. ಲೋಕಸಭೆ ಚುನಾವಣೆಯ ಕೊನೆಯ ಹಂತದವರೆಗೂ ಅಂಬಾನಿ, ಅದಾನಿಯನ್ನು ಕಾಂಗ್ರೆಸ್ ವಿರೋಧಿಸಿದೆ ಎಂದು ಸಚಿವರು ಹೇಳಿದರು.

ಮಾಧ್ಯಮ ಪ್ರತಿನಿಧಿಗಳ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಸಚಿವರು, ಬಣ್ಣದ ಆಧಾರದಲ್ಲಿ ಜನಾಂಗವನ್ನು ಪ್ರತ್ಯೇಕಿಸುವುದನ್ನು ಭಾರತೀಯ ಸಂಸ್ಕೃತಿ ಸಹಿಸುವುದಿಲ್ಲ. ಆಫ್ರಿಕನ್ ಜನರ ಜೊತೆ ಹೋಲಿಕೆ ಮಾಡಿದರೆ ಅಪಮಾನ ಮಾಡಿದಷ್ಟೆ ಅಲ್ಲ, ಆಫ್ರಿಕನ್ ಜನರನ್ನು ನೋಡುವ ಮನಸ್ಥಿತಿಯೂ ಹೊಂದಬಾರದು. ನಾನು ಶ್ಯಾಮ್ ಪತ್ರೋಡ ಅವರ ಹೇಳಿಕೆಯನ್ನು ಒಪ್ಪುವುದಿಲ್ಲ. ತಕ್ಷಣ ಅವರು ತಮ್ಮ ಹೇಳಿಕೆಯನ್ನು ಹಿಂಪಡೆಯಬೇಕು ಮತ್ತು ಜನರ ಕ್ಷಮೆ ಕೇಳಬೇಕು ಎಂದರು.

## ಗುರುವಿನ ಕೃಪೆಯಿಂದ ಸಕಲವೂ ಸಾಧ್ಯ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಜಗತ್ತಿನಲ್ಲಿ ಗುರುವಿಗೆ ಅತ್ಯಂತ ಮಹತ್ವದ ಸ್ಥಾನವಿದೆ. ಹರ ಮುನಿದರೂ ಗುರು ಕಾಯ್ವ ಎನ್ನುವ ಮಾತು ಗುರುವಿನ ಮಹತ್ವವನ್ನು ಎತ್ತಿ ತೋರಿಸುತ್ತದೆ. ಗುರುವಿನ ಕೃಪೆಯಿಂದ ಸಕಲವೂ ಸಾಧ್ಯ ಎಂದು ಶ್ರೀ ಕ್ಷೇತ್ರ ಹೆಬ್ಬಳ್ಳಿ ಚೈತನ್ಯಾಶ್ರಮದ ಪ.ಪೂ. ಶ್ರೀ ದತ್ತಾವಧೂತರು ಹೇಳಿದರು.



ಸಮೀಪದ ನಿಡಗುಂದಿ ಗ್ರಾಮದ ಶ್ರೀ ಮಾರುತಿ ದೇವಸ್ಥಾನದಲ್ಲಿ ಗುರುವಾರ ಜರುಗಿದ ಪವಮಾನ ಹೋಮ ಮತ್ತು ಶ್ರೀ ಮಾರುತಿಗೆ ಜರುಗಿದ ಕ್ಷೀರಾಭಿಷೇಕದ ನೇತೃತ್ವವನ್ನು ವಹಿಸಿ ಆಶೀರ್ವಚನ ನೀಡಿದರು.

ಜೀವನವೆಂದರೆ ಬರೀ ಹಣ ಗಳಿಸುವುದೊಂದೇ ಅಲ್ಲ. ಮನಸ್ಸಿನಲ್ಲಿ ಶಾಂತಿ, ಸಮಾಧಾನ ಹೊಂದುವುದು ಜೀವನದ ಮುಖ್ಯ ಗುರಿಯಾಗಿರಬೇಕು. ಜಗತ್ತಿನಲ್ಲಿನ ವೈದ್ಯರು ನಿಮ್ಮ ಯಾವುದೇ ರೋಗಕ್ಕೂ ಶಸ್ತ್ರಚಿಕಿತ್ಸೆ ಮಾಡಬಲ್ಲರು. ಆದರೆ ನಿಮ್ಮ ಮನಸ್ಸಿನ ರೋಗಕ್ಕೆ, ಮನಸ್ಸನ್ನು ಸಮಾಧಾನವಾಗಿಡಲು ಗುರುಗಳಿಂದ ಮಾತ್ರ ಸಾಧ್ಯ. ಆದ್ದರಿಂದ ಗುರುಗಳಿಗೆ ಅನನ್ಯ ಶರಣು ಹೋಗಬೇಕೆಂದು ಹೇಳಿದರು.

ಇಂದು ಹೆಚ್ಚಿನವರು ಜೀವನದಲ್ಲಿ ಶಾಂತಿ ಇಲ್ಲದಂತೆ ಒದ್ದಾಡುತ್ತಿದ್ದೇವೆ. ಜಗತ್ತಿನಲ್ಲಿ ಭಾರತೀಯ ಸಂಸ್ಕೃತಿಯು ಅತ್ಯಂತ ಶ್ರೇಷ್ಠವಾಗಿದ್ದು, ಜಗತ್ತಿನ ಇತರೆ ದೇಶಗಳ ಜನರು ನಮ್ಮೆಡೆಗೆ ಅಭಿಮಾನದಿಂದ ನೋಡುತ್ತಿದ್ದಾರೆ. ಇದನ್ನು ಬೆಳೆಸಿಕೊಂಡು ಹೋಗುವಲ್ಲಿ ನಮಗೆ ಮಾರುತಿಯ ಆಶೀರ್ವಾದದ ಅವಶ್ಯಕತೆ ಇದ್ದು, ಮೇಲಿಂದ ಮೇಲೆ ಇಂತಹ ಹೋಮ-ಹವನಾದಿಗಳು ಗ್ರಾಮದಲ್ಲಿ ನಡೆಯುತ್ತಿದ್ದರೆ ಗ್ರಾಮಗಳು ಮತ್ತು ಗ್ರಾಮದ ಜನತೆ ಶಾಂತಿಯಿಂದ ಇರಲು ಸಾಧ್ಯವಾಗುತ್ತದೆ ಎಂದರು.

ನಿವೃತ್ತ ಮುಖ್ಯ ಶಿಕ್ಷಕ ಅರುಣ ಕುಲಕರ್ಣಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಮಹಾರಾಜರ ಪಾದುಕೆಗಳಿಗೆ ಕಾಕಡಾರುತಿ, ಹನುಮಾನ ಚಾಲೀಸಾ ಪಠಣ, ಸಂಜೆ ಮಹಿಳಾ ಮಂಡಳಗಳಿಂದ ಭಜನೆ, ಹುಬ್ಬಳ್ಳಿಯ ಶ್ರೀರಕ್ಷಾ ಜೋಷಿಯವರಿಂದ ಭರತನಾಟ್ಯ ಕಾರ್ಯಕ್ರಮಗಳು ಜರುಗಿದವು. ಧಾರ್ಮಿಕ ಕಾರ್ಯಗಳ ಯಜಮಾನತ್ವವನ್ನು ಗ್ರಾಮದ ಹಿರಿಯರಾದ ರಂಗರಾವ ಕುಲಕರ್ಣಿ ಮತ್ತು ಪರಿವಾರದವರು ವಹಿಸಿಕೊಂಡಿದ್ದರು.

## ಜ.ತೋಂಟದಾರ್ಯ ಶಾಲೆಗೆ ಉತ್ತಮ ಫಲಿತಾಂಶ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಜಗದ್ಗುರು ತೋಂಟದಾರ್ಯ ಕನ್ನಡ ಮತ್ತು ಆಂಗ್ಲ ಮಾಧ್ಯಮ ಪ್ರೌಢಶಾಲೆಯ ವಿದ್ಯಾರ್ಥಿಗಳು ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ ಪಡೆದಿದ್ದಾರೆ.

ಆಂಗ್ಲ ಮಾಧ್ಯಮ ವಿಭಾಗದಲ್ಲಿ: ಸಂಜನಾ ಪಾಟೀಲ 625ಕ್ಕೆ 571 ಅಂಕ ಪಡೆದು ಶೇ.91.36 ಫಲಿತಾಂಶದೊಂದಿಗೆ ಶಾಲೆಗೆ ಪ್ರಥಮ, ನಿದರ್ಶನ ಬಗಾಡೆ 563 ಅಂಕ ಪಡೆದು ಶೇ.90.08 ಫಲಿತಾಂಶದೊಂದಿಗೆ ದ್ವಿತೀಯ, ಮುಸ್ತಫಾ ಬೆಳ್ಳಿಕೊಪ್ಪ 557 ಅಂಕಗಳೊಂದಿಗೆ ಶೇ.89.12 ಫಲಿತಾಂಶದೊಂದಿಗೆ ತೃತೀಯ, ಅಂಕಿತಾ ಬೆನಹಾಳ 529 (ಶೇ84.64) ಅಂಕ, ಸಹನಾ ಸಂಬರಗಿ 517 (ಶೇ.82.72) ಅಂಕ ಪಡೆದು ಶಾಲೆಗೆ 5ನೇ ಸ್ಥಾನ ಪಡೆದಿದ್ದಾರೆ.

ಕನ್ನಡ ಮಾಧ್ಯಮ ವಿಭಾಗದಲ್ಲಿ: ಗಾಯತ್ರಿ ಕಾಗಿ 566 (90.56) ಶಾಲೆಗೆ ಪ್ರಥಮ ಸ್ಥಾನ, ಲಕ್ಷ್ಮೀ ಶಿಂಪಗೇರ 543 (86.88) ದ್ವಿತೀಯ, ಅಜಮಾಯಿನ್ ನಾಗನೂರ 531 (84.96) ತೃತೀಯ, ವೈಷ್ಣವಿ ಶಿಂಧೆ 523 (83.68) ಶಾಲೆಗೆ ನಾಲ್ಕನೇ ಸ್ಥಾನ, ಭೂಮಿಕಾ ಪಿಸೆ 505 (80.08) ಶಾಲೆಗೆ ಐದನೇ ಸ್ಥಾನ ಪಡೆದಿದ್ದಾರೆ.

ಸಾಧಕ ವಿದ್ಯಾರ್ಥಿಗಳಿಗೆ ಪೂಜ್ಯ ಜಗದ್ಗುರು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು, ತೋಂಟ-ದಾರ್ಯ ಶಿಕ್ಷಣ ಸಂಸ್ಥೆಯ ಚೇರಮನ್ ಶಿವಾನಂದ ಎಸ್.ಪಟ್ಟಣಶೆಟ್ಟರ, ಕಾರ್ಯದರ್ಶಿ ಕೊಟ್ರೇಶ ಮೆಣಸಿನಕಾಯಿ, ಶಿಕ್ಷಕರಾದ ಕೃಷ್ಣಾ ಗೌಡರ, ಮಧುಮತಿ ಬಂಡಿವಾಡ, ವಂದನಾ ಮಿಸಾಳ, ಸುರೇಖಾ ಕುಂಬಾರಗೇರಿಮಠ ಹಾಗೂ ಸಿಬ್ಬಂದಿ ವರ್ಗದವರು ಅಭಿನಂದನೆ ಸಲ್ಲಿಸಿದ್ದಾರೆ.

## ಶ್ರೀ ರಾಮ ಕರುಣಾನಂದ ಶಿಕ್ಷಣ ಸಂಸ್ಥೆಯ ಫಲಿತಾಂಶ

■ವಿಜಯಸಾಕ್ಷಿ ಸುದ್ದಿ, ಗದಗ

ಪ್ರಸಕ್ತ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಬಿಂಕದಕಟ್ಟಿಯ ಶ್ರೀ ರಾಮ ಕರುಣಾನಂದ ಶಿಕ್ಷಣ ಸಂಸ್ಥೆಯ ಆಂಗ್ಲ ಮಾಧ್ಯಮ ಶಾಲೆಯ ವಿದ್ಯಾರ್ಥಿಗಳು ಉತ್ತಮ ಫಲಿತಾಂಶ ಸಾಧಿಸಿದ್ದಾರೆ.

ಶಾಲೆಯ ಒಟ್ಟು ಫಲಿತಾಂಶ ಶೇ.90 ಆಗಿದ್ದು, ಶೇ.82.08 ಅಂಕಗಳೊಂದಿಗೆ ಉದಯಗೌಡ ಮ.ಚಂ. ಸಂಕನಗೌಡ್ರ ಪ್ರಥಮ, ದ್ವಿತೀಯ ಸ್ಥಾನವನ್ನು ಶೇ.79.52 ಅಂಕಗಳೊಂದಿಗೆ ಕಮಲಾ ಪ.ಪೂಜಾರ ಮತ್ತು ತೃತೀಯ ಸ್ಥಾನವನ್ನು ಶೇ.77.76 ಅಂಕದೊಂದಿಗೆ ಪ್ರೀತಿ ತಿ.ಹಸರಗೊಣ್ಣವರ ಪಡೆದಿದ್ದಾಳೆ.

ಸಾಧನೆಗೈದ ಎಲ್ಲ ವಿದ್ಯಾರ್ಥಿಗಳಿಗೆ ಶಾಲೆಯ ಆಡಳಿತ ಮಂಡಳಿಯ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಆಡಳಿತ ಮಂಡಳಿಯ ಸರ್ವ ಸದಸ್ಯರು ಹಾಗೂ ಶಾಲೆಯ ಸಿಬ್ಬಂದಿ ವರ್ಗ ಅಭಿನಂದಿಸಿದ್ದಾರೆ.

## ಯೋಗ ದಿನಾಚರಣೆ ಕುರಿತು ಪೂರ್ವಭಾವಿ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ





ಮುಂಬರುವ 10ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯನ್ನು ಹತ್ತು ಹಲವಾರು ಕ್ರಿಯಾ ಚಟುವಟಿಕೆಗಳ ಮೂಲಕ ಅತ್ಯಾಕರ್ಷಕವಾಗಿ ಸಾರ್ಥಕ ರೂಪದಲ್ಲಿ ಆಚರಿಸಬೇಕೆಂಬ ಅಭಿಲಾಷೆಯಿಂದ ಗದಗ ಜಿಲ್ಲಾ ಯೋಗ ಒಕ್ಕೂಟ ಸಂಸ್ಥೆಯವರು ಪೂರ್ವಭಾವಿ ಸಮಾಲೋಚನೆ ಸಭೆ ಕರೆದಿದ್ದಾರೆ.

ಸಭೆಯು ಮೇ. 12ರ ಮುಂಜಾನೆ 10.30 ಗಂಟೆಗೆ ಸಿದ್ಧಲಿಂಗ ನಗರದಲ್ಲಿನ ಬಸವ ಯೋಗ ಮಂದಿರ (ಬಸವೇಶ್ವರ ಹೈಸ್ಕೂಲ್ ಆವರಣ)ದಲ್ಲಿ ಜರುಗಲಿದೆ. ಸಭೆಗೆ ಗದಗ ಜಿಲ್ಲೆಯ ಎಲ್ಲ ಯೋಗ ಸಂಘ-ಸಂಸ್ಥೆ, ಸಂಘಟನೆಗಳ ಅಧ್ಯಕ್ಷರು, ಕಾರ್ಯದರ್ಶಿಗಳು ಮತ್ತು ಯೋಗ ಕಾಲೇಜುಗಳ ಪ್ರಾಚಾರ್ಯರು, ಯೋಗ ಶಿಕ್ಷಕರು, ಹಿರಿಯ ಯೋಗ ಸಾಧಕರು ಹಾಗೂ ಯೋಗಾಸಕ್ತ ಬಂಧುಗಳೆಲ್ಲರನ್ನು ಆಹ್ವಾನಿಸಲಾಗಿದ್ದು, ಸಭೆಗೆ ದೂರದ ಊರಿಂದ ಬರುವವರಿಗೆ ಒಂದು ಕಡೆಯಿಂದ ಬಸ್ ಚಾರ್ಜ್‌ನ್ನು ಕೊಡಲಾಗುವುದು.

ಸಭೆಯಲ್ಲಿ ತಮ್ಮ ಸೂಕ್ತ ಸಲಹೆ, ಸೂಚನೆ ಸಹಕಾರಗಳನ್ನು ನೀಡಿ ಸಭೆಯನ್ನು ಯಶಸ್ವಿಗೊಳಿಸಬೇಕೆಂದು ಗದಗ ಜಿಲ್ಲಾ ಯೋಗ ಒಕ್ಕೂಟದ ಅಧ್ಯಕ್ಷ ಎಂ.ಎಸ್. ಶಿರಿಯಣ್ಣವರ ಮತ್ತು ಕಾರ್ಯದರ್ಶಿ ಕೆ.ಎಸ್. ಪಲ್ಲೇದ ಪತ್ರಿಕಾ ಪ್ರಕಟಣೆ ಮೂಲಕ ವಿನಂತಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka